ಆ)	ಸದರಿ ಯೋಜನೆಗಳಡಿ 2019–20ನೇ ಸಾಲಿನಲ್ಲಿ ಯಾವ ಯಾವ ಗಣಿಬಾಧಿತ ರಸ್ತೆಗಳನ್ನು ಮತ್ತು ಪ್ರದೇಶಗಳನ್ನು ಅಭಿವೃದ್ಧಿ ಪಡಿಸಲು ಎಷ್ಟು ಅನುದಾನ ನೀಡಲಾಗಿದೆ;	ರಾಜ್ಯದಲ್ಲಿ 2019–20ನೇ ಸಾಲಿನಲ್ಲಿ (ಫೆಬ್ರವರಿ 2020ರ ಅಂತ್ಯದವರೆಗೆ) ಜಿಲ್ಲಾ ಖನಿಜ ಪ್ರತಿಷ್ಠಾನ ಟ್ರಸ್ಟ್ ನಿಧಿಯಲ್ಲಿ ರೂ. 44943.30 ಲಕ್ಷ ವಂತಿಕೆ ಸಂಗ್ರಹವಾಗಿರುತ್ತದೆ. 2015–16ರಿಂದ 2019–20 (ಫೆಬ್ರವರಿ 2020ರ ಅಂತ್ಯ ದವರೆಗೆ ಒಟ್ಟಾರೆ ರೂ. 188505.62 ಲಕ್ಷ ವಸೂಲಾದ ಮೊತ್ತದಲ್ಲಿ ಗಣಿಬಾಧಿತ ರಸ್ತೆ ಹಾಗೂ ಪ್ರದೇಶಗಳ ಅಭಿವೃದ್ಧಿಗೆ ರೂ. 189880.14 ಲಕ್ಷಕ್ಕೆ ಕ್ರಿಯಾ ಯೋಜನೆಯನ್ನು ತಯಾರಿಸಿ, 4200 ಕಾಮಗಾರಿಗಳನ್ನು ಕೈಗೊಂಡು ರೂ. 35717.32 ಲಕ್ಷ ವಿನಿಯೋಗಿಸಿ 589 ಕಾಮಗಾರಿಗಳನ್ನು ಪೂರ್ಣಗೊಳಿಸಲಾಗಿರುತ್ತದೆ.
ಇ)	2019–20ನೇ ಸಾಲಿನಲ್ಲಿ ಬೆಳಗಾವಿ ಜಿಲ್ಲೆಯ ಗಣಿಬಾಧಿತ ರಸ್ತೆಗಳು ಮತ್ತು ಪ್ರದೇಶಗಳ ಅಭಿವೃದ್ಧಿಗೆ ಅನುದಾನ ನೀಡಲಾಗಿದೆಯೇ;	2019–20ನೇ ಸಾಲಿನಲ್ಲಿ ಬೆಳಗಾವಿ ಜಿಲ್ಲೆಯಲ್ಲಿ ಗಣಿಬಾಧಿತ ರಸ್ತೆಗಳು ಮತ್ತು ಪ್ರದೇಶಗಳ ಅಭಿವೃದ್ಧಿಗೆ ಅನುದಾನ ನೀಡಲಾಗಿದೆ.
ಈ)	ನೀಡಿದ್ದಲ್ಲಿ, ಯಾವ ಯಾವ ರಸ್ತೆಗಳು ಮತ್ತು ಪ್ರದೇಶದ ಅಭಿವೃದ್ಧಿಗೆ ಅನುದಾನ ನೀಡಲಾಗಿದೆ? (ಅನುದಾನ ಹಂಚಿಕೆವಾರು ಮಾಹಿತಿ ನೀಡುವುದು)	ಬೆಳಗಾವಿ ಜಿಲ್ಲೆಯಲ್ಲಿ ಡಿ.ಎಂ.ಎಫ್ ಅನುದಾನದಡಿ ರೂ. 1698.25 ಲಕ್ಷ ವಂತಿಕೆ ಸಂಗ್ರಹವಾಗಿದ್ದು, ರಸ್ತೆಗಳು ಮತ್ತು ಪ್ರದೇಶದ ಅಭಿವೃದಿಗಾಗಿ ರೂ. 1104.30 ಲಕ್ಷಗಳ ಕ್ರಿಯಾ ಯೋಜನೆಯನ್ನು ತಯಾರಿಸಿ ಒಟ್ಟು 70 ಕಾಮಗಾರಿಗಳನ್ನು ಕೈಗೊಂಡಿದ್ದು, ರೂ. 1026.71 ಲಕ್ಷಗಳನ್ನು ವಿನಿಯೋಗಿಸಿ 09 ಕಾಮಗಾರಿಗಳನ್ನು ಪೂರ್ಣಗೊಳಿಸಲಾಗಿರುತ್ತದೆ. ವಿವರಗಳನ್ನು <u>ಅನುಬಂಧ–1</u>ರಲ್ಲಿ ಪೂರೈಸಿದೆ.

ಸಂಖ್ಯೆ: ಸಿಐ 164 ಎಂಎಂಎನ್ 2020

(ಸಿ.ಸಿ. ಪಾಟೀಲ)
ಗಣಿ ಮತ್ತು ಭೂವಿಜ್ಞಾನ ಸಚಿವರು

2020

ಅನುಬಂಧ-1

2019-20ನೇ ಸಾಲಿನಲ್ಲಿ (ಫೆಬ್ರವರಿ ಅಂತ್ಯದವರೆಗೆ) ಡಿಎಂಎಫ್ ನಿಧಿಯಲ್ಲಿ ಅನುಮೋದಿತ ಕ್ರಿಯಾಯೋಜನೆಗಳಲ್ಲಿ ಅಭಿವೃದ್ಧಿ ಕಾರ್ಯಗಳಿಗೆ ಹಂಚಿಕೆಯಾದ ಮೊತ್ತ ಹಾಗು ಖರ್ಚುಮಾಡಿದ ವಿವರಗಳು

ರೂ. ಲಕ್ಷಗಳಲ್ಲಿ

ಕ್ರಸಂ	ಅಭಿವೃದ್ಧಿ ಯೋಜನೆಗಳ ವಿವರ	ಕಾಮಗಾರಿಗಳ ಸಂಖ್ಯೆ	ಅನುಮೋದಿತ ಕ್ರಿಯಾಯೋಜನೆಯ ಮೊತ್ತ	ವಿನಿಯೋಗಿಸಿದ ಮೊತ್ತ
1	ಕುಡಿಯುವ ನೀರು	370	24856.33	3950.70
2	ಪರಿಸರ ಮಾಲಿನ್ಯ ತಡೆಗಟ್ಟುವಿಕೆ ನಿಯಂತ್ರಣ ಕಾರ್ಯಗಳಿಗೆ	20	1243.60	237.26
3	ಆರೋಗ್ಯ ರಕ್ಷಣ	146	20491.61	1970.87
4	ಶಿಕ್ಷಣ	419	13827.10	4907.91
5	ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಂಬಂಧ ಕಾರ್ಯಕ್ರಮ	231	1941.08	793.36
6	ವಯಸ್ಸಾದ ಮತ್ತು ಅಂಗವಿಕಲ ವ್ಯಕ್ತಿಗಳ ಕಲ್ಯಾಣ.	9	442.91	419.63
7	ಕೌಶಲ್ಯಾಭಿವೃದ್ಧಿ ಕಾರ್ಯಗಳಿಗೆ	174	5169.02	556.69
8	ನೈರ್ಮಲ್ಯತೆ	42	12081.31	1472.78
9	ಭೌತಿಕ ಮೂಲಸೌಕರ್ಯ	348	32406.41	10672.63
10	ನೀರಾವರಿ	32	5788.1	1357.70
11	ಶಕ್ತಿ ಮತ್ತು ನೀರಿನ ಅಭಿವೃದ್ಧಿ	201	4461.84	887.08
12	ಇನ್ನಿತರೆ ಗಣಿಗಾರಿಕೆ ಜಿಲ್ಲೆಗಳಲ್ಲಿ ಪರಿಸರದ ಗುಣಮಟ್ಟ ಹೆಚ್ಚಿಸುವುದು.	9	1821.17	76.07
	ಒಟ್ಟು	**2001**	**124530.48**	**27302.67**

CI 164 ಮಮಅ 2020

ಜಂಟಿ ನಿರ್ದೇಶಕರು 19:03:2020

ಕರ್ನಾಟಕ ಸರ್ಕಾರ

ಸಂಖ್ಯೆ: HORTI 144 HGM 2020

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿಗಳ ಕಟ್ಟಡ
ಬೆಂಗಳೂರು, ದಿ: 19-3-2020

33 u.s
20/3/2020

ಇವರಿಂದ:
ಸರ್ಕಾರದ ಕಾರ್ಯದರ್ಶಿ
ತೋಟಗಾರಿಕೆ ಇಲಾಖೆ

ಇವರಿಗೆ:
ಕಾರ್ಯದರ್ಶಿಯವರು
ಕರ್ನಾಟಕ ವಿಧಾನ ಸಭಾ ಸಚಿವಾಲಯ,
ವಿಧಾನಸೌಧ, ಬೆಂಗಳೂರು.

ಮಾನ್ಯರೇ,

ವಿಷಯ : ಶ್ರೀ ದೊಡ್ಡನಗೌಡರ ಮಹಾಂತೇಶ್ ಬಸವಂತರಾಯ, ವಿಸಸ, ಇವರ ಚುಕ್ಕೆಗುರುತಿಲ್ಲದ ಪ್ರಶ್ನೆ: 2627 ರ ಬಗ್ಗೆ.

****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಶ್ರೀ ದೊಡ್ಡನಗೌಡರ ಮಹಾಂತೇಶ್ ಬಸವಂತರಾಯ ವಿಸಸ, ಇವರ ಚುಕ್ಕೆಗುರುತಿಲ್ಲದ ಪ್ರಶ್ನೆ: 2627ಕ್ಕೆ ತೋಟಗಾರಿಕೆ ಇಲಾಖೆಯ ಉತ್ತರದ 100 ಪ್ರತಿಗಳನ್ನು ಇದರೊಂದಿಗೆ ಲಗತ್ತಿಸಿ ಮುಂದಿನ ಕ್ರಮಕ್ಕಾಗಿ ಕಳುಹಿಸಲು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ನಂಬುಗೆಯ

(ಜಿ.ಎಸ್.ಪ್ರಸನ್ನಕುಮಾರ್)
ಸರ್ಕಾರದ ಉಪ ಕಾರ್ಯದರ್ಶಿ
ತೋಟಗಾರಿಕೆ ಇಲಾಖೆ
19/3/20

ಕರ್ನಾಟಕ ವಿಧಾನಸಭೆ

1. ಚುಕ್ಕೆಗುರುತಿಲ್ಲದ ಪ್ರಶ್ನೆ ಸಂಖ್ಯೆ : 2627
2. ಸದಸ್ಯರ ಹೆಸರು : ಶ್ರೀ ದೊಡ್ಡಗೌಡರ ಮಹಾಂತೇಶ ಬಸವಂತರಾಯ
3. ಉತ್ತರಿಸುವ ಸಚಿವರು : ಪೌರಾಡಳಿತ, ತೋಟಗಾರಿಕೆ ಮತ್ತುರೇಷ್ಮೆ ಸಚಿವರು
4. ಉತ್ತರಿಸಬೇಕಾದ ದಿನಾಂಕ : 20.03.2020

ಪ್ರಶ್ನೆ	ಉತ್ತರ
ಅ)ರಾಜ್ಯದ ತೋಟಗಾರಿಕೆ ಪ್ರದೇಶವನ್ನು ಇಸ್ರೇಲ್ ಮಾದರಿಯಲ್ಲಿ ಅಭಿವೃದ್ಧಿಪಡಿಸಲು ಸರ್ಕಾರ ನಿರ್ಧರಿಸಿದೆಯೇ?	ಹೌದು, ಪ್ರಾರಂಭಿಕವಾಗಿ ಕಾರವಾರ, ತುಮಕೂರು, ಯಾದಗಿರಿ ಮತ್ತು ಹಾವೇರಿ ಜಿಲ್ಲೆಗಳಲ್ಲಿ ಇಸ್ರೇಲ್ ತಂತ್ರಜ್ಞಾನ ಆಧಾರಿತ ಕೃಷಿ ಮಾದರಿ ಅನುಸಾರ ತೋಟಗಾರಿಕೆ ಬೆಳೆಗಳನ್ನು ಬೆಳೆಯಲು ರೈತರಿಗೆ ಅನುಕೂಲ ಕಲ್ಪಿಸಿ, ಪ್ರೋತ್ಸಾಹಿಸಲು ಉದ್ದೇಶಿಲಾಗಿದೆ.
ಆ) ಹಾಗಿದ್ದಲ್ಲಿ ಯಾವ ಯಾವ ಯೋಜನೆಗಳನ್ನು ಕೈಗೊಂಡಿದೆ? (ವಿವರ ನೀಡುವುದು)	ರಾಜ್ಯದಲ್ಲಿನ ಕೃಷಿ ಮತ್ತು ತೋಟಗಾರಿಕೆ ವಲಯದಲ್ಲಿ ಇಸ್ರೇಲ್ ತಂತ್ರಜ್ಞಾನ ಆಧಾರಿತ ಕೃಷಿ ಪದ್ಧತಿಯನ್ನು ಜಾರಿಗೆ ತರುವ ನಿಟ್ಟಿನಲ್ಲಿ ಪೂರಕವಾದ ಸಾಧಕ-ಭಾದಕಗಳ ಪರಿಶೀಲಿಸಿ ರೈತರಿಗೆ ಉಪಯುಕ್ತ ಸಲಹೆ ಮತ್ತು ಮಾರ್ಗದರ್ಶನಗಳ ಕಾರ್ಯಸೂಚಿಗಳನ್ನು ಅಂತಿಮಪಡಿಸಲು ಸಮಿತಿ ವರದಿಯ ಆಧಾರದ ಮೇಲೆ ಇಸ್ರೇಲ್ ತಂತ್ರಜ್ಞಾನ ಆಧಾರಿತ ಸಮಗ್ರ ಕೃಷಿ ಮಿಷನ್ 2019ರ ಫೆಬ್ರವರಿಯಲ್ಲಿ ವಿಶೇಷ ಸಾಂಸ್ಥಿಕ ಕೃಷಿ ಮಿಷನ್ ಸ್ಥಾಪಿಸಲಾಗಿದೆ. ಇಸ್ರೇಲ್ ತಂತ್ರಜ್ಞಾನ ಆಧಾರಿತ ಕೃಷಿ ಪದ್ಧತಿಯನ್ನು ಅನುಷ್ಠಾನಗೊಳಿಸಲು ಬಹಳಷ್ಟು ಪೂರ್ವ ಸಿದ್ಧತೆ ಅವಶ್ಯಕವಿರುತ್ತದೆ. ಈ ನಿಟ್ಟಿನಲ್ಲಿ ಸರ್ಕಾರದ ಅಪರ ಮುಖ್ಯಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರ ಅಧ್ಯಕ್ಷತೆ ಮತ್ತು ಸಂಬಂಧಪಟ್ಟ ಇಲಾಖೆ ಕಾರ್ಯದರ್ಶಿಗಳ ನೇತೃತ್ವದ ಸಮಿತಿಯನ್ನು ರಚಿಸಲಾಗಿದೆ. ಈ ಸಮಿತಿಯು ಕಾಲಕಾಲಕ್ಕೆ ಕೃಷಿ ಮಿಷನ್ ಅನುಷ್ಠಾನಗೊಳ್ಳಿಸುವ ಕಾರ್ಯ ಚಟುವಟಿಕೆಗಳಿಗೆ ಅಗತ್ಯವಾದ ಸಲಹೆ ಮತ್ತು ಸೂಚನೆಗಳನ್ನು ನೀಡುತ್ತದೆ. ಈ ಯೋಜನೆ ಅನುಷ್ಠಾನ ಕಾರ್ಯದಲ್ಲಿ ಸಾಮರ್ಥ್ಯಾಭಿವೃದ್ಧಿ ಮತ್ತು ಜ್ಞಾನ ವರ್ಗಾವಣೆ ಬಹುಮುಖ್ಯವಾದ ಅಂಶವಾಗಿದೆ. ಕೃಷಿ ವಿಶ್ವವಿದ್ಯಾನಿಲಯಗಳು ಮತ್ತು ತೋಟಗಾರಿಕೆ ವಿಶ್ವವಿದ್ಯಾನಿಲಯದ ಸೇವೆಯನ್ನು ಸದರಿ ಯೋಜನೆ ಅನುಷ್ಠಾನಗೊಳಿಸುವ ಹಿನ್ನೆಲೆಯಲ್ಲಿ ಬಳಕ ಮಾಡಿಕೊಳ್ಳಲಾತ್ತದೆ.. ಈ ಹಿನ್ನೆಲೆಯಲ್ಲಿ ರಾಜ್ಯದಲ್ಲಿನ 4 ಕೃಷಿ ಮತ್ತು 1 ತೋಟಗಾರಿಕೆ ವಿಶ್ವವಿದ್ಯಾನಿಲಯಗಳ ಪಾತ್ರ ಅತ್ಯಗತ್ಯವಾಗಿದೆ. ಈಗಾಗಲೇ 5 ವಿಶ್ವವಿದ್ಯಾನಿಲಯಗಳ ಉಪಕುಲಪತಿಗಳೊಂದಿಗೆ ಹಲವು ಬಾರಿ ಯೋಜನೆ ಅನುಷ್ಠಾನದ ಕುರಿತು ವಿಸ್ತೃತ ಸಭೆಗಳನ್ನು ನಡೆಸಲಾಗಿದೆ. 5 ವಿಶ್ವವಿದ್ಯಾನಿಲಯಗಳ ಒಳಗೊಂಡ ಸದಸ್ಯರ ಉಪಸಮಿತಿಗಳನ್ನು ರಚಿಸಲಾಗಿದೆ. ಜೊತೆಗೆ ಯೋಜನೆಯನ್ನು ಜಾರಿಗೊಳಿಸಲು ಬೇಕಾದ ಪೂರ್ವ ಸಿದ್ಧತೆ ಮತ್ತು ಇತರೆ ಚಟುವಟಿಕೆಗಳಿಗಾಗಿ ವಿವಿಗಳು ಮತ್ತು ಇಲಾಖೆಗಳಿಗೆ ಜವಾಬ್ದಾರಿಯನ್ನು ಈ ಕೆಳಕಂಡಂತೆ ನೀಡಲಾಗಿದೆ. ಬೆಂಗಳೂರು ಕೃಷಿ ವಿಶ್ವವಿದ್ಯಾನಿಲಯಕ್ಕೆ ಪ್ರಾತ್ಯಕ್ಷಿಕೆ ತಾಕುಗಳ ಸ್ಥಾಪನೆ, ಧಾರವಾಡ ಕೃಷಿ ವಿಶ್ವವಿದ್ಯಾನಿಲಯಕ್ಕೆ ರೈತರಿಗೆ ಅರಿವು ಮತ್ತು ತೋಟಗಾರಿಕಾ ಪದ್ಧತಿಗಳ ಕೈಪಿಡಿ ಸಿದ್ದಪಡಿಸುವುದು, ರಾಯಚೂರು ಕೃಷಿ ವಿಶ್ವವಿದ್ಯಾನಿಲಯಕ್ಕೆ ಜಾಗೃತಿ/ ಅರಿವು ಮೂಡಿಸಲು ವಿಷಯ ಸೃಜನೆ ಕುರಿತು, ಶಿವಮೊಗ್ಗ ಕೃಷಿ ಮತ್ತು ತೋಟಗಾರಿಕೆ ವಿಶ್ವವಿದ್ಯಾನಿಲಯಕ್ಕೆ ಕೃಷಿ ಮತ್ತುತಿ ತೋಟಗಾರಿಕೆ ಪದವೀಧರರಿಗೆ ಒಂದು ವರ್ಷದ ಡಿಪ್ಲೋಮೊ ವಿಷಯ ಸಿದ್ದಪಡಿಸುವುದು ಮತ್ತು ಬಾಗಲಕೋಟೆ, ತೊಟಗಾರಿಕೆ ವಿಶ್ವವಿದ್ಯಾನಿಲಯಕ್ಕೆ ಉತ್ತಮ ಕೃಷಿ ಮತ್ತು ತೋಟಗಾರಿಕೆ ಪದ್ಧತಿಗಳ ಮಾಹಿತಿ ಕ್ರೋಢಿಕರಿಸುವು ಬಗ್ಗೆ ವರದಿ ನೀಡಲು ಸೂಚಿಸಲಾಗಿತ್ತು. ಈಗಾಗಲೇ ವಿಶ್ವವಿದ್ಯಾನಿಲಯಗಳು ಕರುಡು ವರದಿಗಳನ್ನು ಸಲ್ಲಿಸಲಾಗಿದ್ದು, ಸದರಿ ವರದಿಗಳನ್ನು ಪರಿಶೀಲಿಸಿ ಮುಂದಿನ ಕ್ರಮಕ್ಕೆ ಆದ್ಯತೆ ನೀಡಲಾಗುವುದು. ಸದರಿ ವಿಷಯಕ್ಕೆ ಸಂಬಂಧಿಸಿದಂತೆ ಜನವರಿ 10, 2020ರಂದು ಜಿಕೆವಿಕೆ, ಬೆಂಗಳೂರಿನಲ್ಲಿ ರಾಜ್ಯಮಟ್ಟದ ಒಂದುದಿನದ ಕಾರ್ಯಾಗಾರವನ್ನು ನಡೆಸಿ, ಮೇಲ್ಕಂಡ ಉಪಸಮಿತಿಗಳು ಕರುಡು ವರದಿಯನ್ನು ಒಪ್ಪಿಸಿರುತ್ತಾರೆ. ಇದೇ ವೇಳೆ ಯೋಜನೆ ಅನುಷ್ಠಾನದ ಅಂತಿಮ ಹಂತದ ಸಿದ್ಧತೆಗಳ ಕುರಿತು ಸುದೀರ್ಘವಾಗಿ ಚರ್ಚೆ ನಡೆಸಲಾಯಿತು.

ಇಸ್ರೇಲ್ ತಂತ್ರಜ್ಞಾನ ಆಧಾರಿತ ಸಮಗ್ರ ಕೃಷಿ ಪದ್ಧತಿಗಳನ್ನು ರೈತರು ಅನುಸರಿಸಬೇಕಾದ ಉಪಯುಕ್ತವಾಗುವ ಮಾದರಿಗಳ ಬಗ್ಗೆ ಇತ್ತೀಚಿಗೆ ಬೆಂಗಳೂರು ಕೃಷಿ ವಿಶ್ವವಿದ್ಯಾನಿಲಯದಲ್ಲಿ ನಡೆದ ಕೃಷಿ ಮೇಳ 2019ರಲ್ಲಿ ವಿಶೇಷವಾದ ಪ್ರಾತ್ಯಕ್ಷಿಕೆ ತಾಕುಗಳನ್ನು ಸ್ಥಾಪಿಸಿ ರೈತರಿಗೆ ಅರಿವು ಮೂಡಿಸುವ ಕಾರ್ಯ ನಡೆಸಲಾಗಿದೆ. ಈ ಮೇಳದಲ್ಲಿ ಲಕ್ಷಾಂತರ ರೈತರು ಭಾಗವಹಿಸಿ ನೂತನ ಕೃಷಿ ಪದ್ಧತಿಗಳ ಬಗ್ಗೆ ಶಿಕ್ಷಣ ಪಡೆದಿರುತ್ತಾರೆ.

ಪ್ರಸ್ತುತ ಬಜೆಟ್ 2020-21ರ ಕಂಡಿಕೆ 35ರಂತೆ, ನೀರು ಮತ್ತು ಗೊಬ್ಬರಗಳ ಬಳಕೆಯ ದಕ್ಷತೆಯನ್ನು ಹೆಚ್ಚಿಸಲು ಮತ್ತು ಕೃಷಿ ಉತ್ಪಾದಕತೆಯನ್ನು ಹೆಚ್ಚಿಸಲು ಸಾಮರ್ಥ್ಯಾಭಿವೃದ್ಧಿ ಮತ್ತು ಅರಿವು ಮೂಡಿಸಲು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುವುದು. ಈ ನಿಟ್ಟಿನಲ್ಲಿ ರಾಜ್ಯಾದ್ಯಂತ 40 ಪ್ರಾತ್ಯಕ್ಷಿಕೆ ಕ್ಷೇತ್ರಗಳನ್ನು ಅಭಿವೃದ್ಧಿಪಡಿಸಿ, ಉತ್ತಮ ಕೃಷಿ ಪದ್ಧತಿಗಳು, ನೂತನ ತಂತ್ರಜ್ಞಾನಗಳ ಬಗ್ಗೆ ಕೃಷಿ ಕಲಿಕೆ ಪ್ರಾತ್ಯಕ್ಷಿಕೆ ನೀಡಲಾಗುವುದು.

ಇಸ್ರೇಲ್ ಮಿಷನ್‌ನ ಕಾರ್ಯ ಯೋಜನೆ :

- **ಪ್ರಾತ್ಯಕ್ಷಿಕೆ ತಾಕುಗಳ ಸ್ಥಾಪನೆ :**
  ಇಸ್ರೇಲ್ ತಂತ್ರಜ್ಞಾನ ಆಧಾರಿತ ಕೃಷಿ ಪದ್ಧತಿಯನ್ನು ರಾಜ್ಯದಲ್ಲಿ ಯಶಸ್ವಿಯಾಗಿ ಅನುಷ್ಠಾನ ಮಾಡುವ ಸಂಬಂಧ ವಿಶ್ವವಿದ್ಯಾನಿಲಯಗಳಲ್ಲಿ ಪ್ರತ್ಯೇಕ ಪ್ರಾತ್ಯಕ್ಷಿಕೆ ತಾಕುಗಳನ್ನು ಸ್ಥಾಪಿಸಲು ಉದ್ದೇಶಿಸಿದೆ. ಇಸ್ರೇಲ್ ದೇಶದಲ್ಲಿ ಅನುಸರಿಸುತ್ತಿರುವ ಕೃಷಿ ಪದ್ಧತಿಗಳಾದ ನೀರಿನ ಬಳಕೆಯಲ್ಲಿ ದಕ್ಷತೆ, ರಸಾವರಿ ಗೊಬ್ಬರಗಳ ಬಳಕೆ, ಹವಾಮಾನಕ್ಕೆ ಅನುಸಾರ ಬೆಳೆಗಳನ್ನು ಬೆಳೆಯುವುದು, ಸೇರಿದಂತೆ ತಂತ್ರಜ್ಞಾನ ಸಂಬಂಧ ರೈತರಲ್ಲಿ ಪೂರ್ಣ ಪ್ರಮಾಣದ ಅರಿವು ಮೂಡಿಸುವ ಜವಾಬ್ದಾರಿಯನ್ನು ವಿಶ್ವವಿದ್ಯಾನಿಲಯಗಳಿಗೆ ನೀಡಲಾಗಿದೆ. ವಿಶ್ವವಿದ್ಯಾನಿಲಯಗಳು ಸಮಗ್ರ ವರದಿಯನ್ನು ನೀಡಲಿದ್ದು, ವರದಿ ಆಧಾರದಲ್ಲಿ ಹಂತ-ಹಂತವಾಗಿ ಇಸ್ರೇಲ್ ಮಾದರಿ ಕೃಷಿ ಯೋಜನೆಯನ್ನು ವಿಶೇಷ ಮಿಷನ್ ಅಡಿಯಲ್ಲಿ ಜಾರಿಗೆ ತರಲು ಉದ್ದೇಶಿಸಲಾಗಿದೆ.

- ಬೆಂಗಳೂರು ಕೃಷಿ ವಿಶ್ವವಿದ್ಯಾನಿಲಯ ಆಯೋಜಿಸಿದ್ದ ಕೃಷಿ ಮೇಳ-2019ರಲ್ಲಿ ರೈತರ ಮಾಹಿತಿಗಾಗಿ ಪ್ರಾತ್ಯಕ್ಷಿಕೆ ತಾಕುಗಳನ್ನು ಸ್ಥಾಪಿಸಲಾಗಿತ್ತು. ಈ ಪ್ರಾತ್ಯಕ್ಷಿಕೆ ತಾಕುಗಳಲ್ಲಿ ರೈತರಿಗೆ ವಿವಿಧ ತಳಿಗಳ ಬಗ್ಗೆ ಮಾಹಿತಿ, ರಸಾವರಿ ಬಳಕೆ, ವೈಜ್ಞಾನಿಕವಾಗಿ ನೀರಿನ ಬಳಕೆ, ನಿಖರ ಬೇಸಾಯ ಪದ್ಧತಿ, ಸಂರಕ್ಷಿತ ಹಾಗೂ ಸ್ವಚಾಲಿತ ನೀರಿನ ಬಳಕೆ, ರೈತರ ಚಟುವಟಿಕೆಗಳಲ್ಲಿನ ಸಾಮರ್ಥ್ಯಾಭಿವೃದ್ಧಿ ಹಾಗೂ ಸಾಮೂಹಿಕ ಕೃಷಿ ಪದ್ಧತಿ ಕುರಿತು ಮೇಳದಲ್ಲಿ ಭಾಗೀದಾರರಾದ ಲಕ್ಷಾಂತರ ರೈತರಿಗೆ ಸಂಪೂರ್ಣ ಮಾರ್ಗದರ್ಶನ ನೀಡಲಾಯಿತ್ತು. ಇದೇ ಮಾದರಿಯನ್ನು ನಾಲ್ಕು ಕೃಷಿ ವಿಶ್ವವಿದ್ಯಾನಿಲಯ ಮತ್ತು ಒಂದು ತೋಟಗಾರಿಕೆ ವಿಶ್ವವಿದ್ಯಾನಿಲಯದ ವ್ಯಾಪ್ತಿಯಲ್ಲಿ ಅನುಷ್ಠಾನಗೊಳಿಸಲಾಗುವುದು.

- **ಓರಿಯಂಟೇಷನ್ ಕೇಂದ್ರಗಳು :**
  ರಾಜ್ಯದ ರೈತ ಸಂಪರ್ಕ ಕೇಂದ್ರಗಳಲ್ಲಿ 200 ಓರಿಯಂಟೇಷನ್ ಕೇಂದ್ರಗಳನ್ನು ಸ್ಥಾಪಿಸಲಾಗುವುದು. ಈ ಕೇಂದ್ರಗಳಲ್ಲಿ ರೈತರಿಗೆ ಇಸ್ರೇಲ್ ತಂತ್ರಜ್ಞಾನ ಆಧಾರಿತ ಕೃಷಿ ಪದ್ಧತಿಗಳ ಕುರಿತು ಮಾರ್ಗದರ್ಶನ ನೀಡಲಾಗುತ್ತದೆ.

- **ರೈತರ ಶಿಕ್ಷಣ :**
  ಪರಿಣಿತಿ ಹೊಂದಿದ ಕೃಷಿ ತಜ್ಞರ ಸಂದರ್ಶನಗಳು, ನೀರಿನ ಬಳಕೆ, ರಸಗೊಬ್ಬರಗಳ ಬಳಕೆ, ಕೃಷಿ ಪದ್ಧತಿ, ಬೆಳೆಯ ತಳಿಗಳ ಮಾಹಿತಿ,

	ಹವಾಮಾನಕ್ಕೆ ಅನುಸಾರ ಯಾವ ಬೆಳೆಗಳನ್ನು ಬೆಳೆಯಬೇಕು, ಪರದೆ ಮನೆ, ನೆರಳು ಮನೆ ಮತ್ತು ಇಳುವರಿ ಪಡೆಯಲು ಅನುಸರಿಸಬೇಕಾದ ಮಾರ್ಗಗಳ ಕುರಿತು ಪ್ರತ್ಯೇಕ ಸಾಕ್ಷ್ಯಚಿತ್ರಗಳನ್ನು ಸಿದ್ಧಪಡಿಸಲಾಗುತ್ತಿದೆ. ಈ ಸಾಕ್ಷ್ಯಚಿತ್ರಗಳನ್ನು ಪ್ರದರ್ಶಿಸಿ ರೈತರಿಗೆ ಶಿಕ್ಷಣ ನೀಡಲಾಗುವುದು. • **ಇಸ್ರೇಲ್ ದೇಶದ ಟೆಲ್ ಅವಿವ್ ವಿಶ್ವವಿದ್ಯಾನಿಲಯದೊಂದಿಗೆ ಒಡಂಬಡಿಕೆ :** ವಿಶೇಷವಾದ ಪರಿಣಿತಿಯನ್ನು ಪಡೆಯಲು ಇಸ್ರೇಲ್ ವಿಶ್ವವಿದ್ಯಾನಿಲಯಗಳೊಂದಿಗೆ ಜ್ಞಾನ ವರ್ಗಾವಣೆಗಾಗಿ ಒಡಂಬಡಿಕೆ ಮಾಡಿಕೊಳ್ಳಲು ಪರಶೀಲಿಸಲಾಗುತ್ತಿದೆ. ಇದರಿಂದಾಗಿ ನಮ್ಮ ರಾಜ್ಯದಲ್ಲಿ ಇಸ್ರೇಲ್ ದೇಶದಲ್ಲಿ ಆಗಿಂದಾಗ್ಗೆ ಅಭಿವೃದ್ಧಿ ಪಡಿಸುವ ತಂತ್ರಜ್ಞಾನದ ಬಳಕೆಗೆ ಉಪಯುಕ್ತವಾತಾವರಣ ಕಲ್ಪಿಸಿದಂತಾಗಲಿದೆ. ಮುಂದಿನ ಆರ್ಥಿಕ ವರ್ಷದಲ್ಲಿನ ಮಿಷನ್ ಕಾರ್ಯ ಸಾಧನೆ (2020–21) :

ಕ್ರ. ಸಂ.	ವಿವರಗಳು
1.	ಪ್ರಾತ್ಯಕ್ಷಿಕೆ ತಾಕುಗಳು
2.	ಓರಿಯಂಟೇಷನ್ ಕೇಂದ್ರಗಳು
3.	ರೈತರ ತರಬೇತಿ
4.	ಉತ್ತಮ ಪದ್ಧತಿಗಳ ಕೈಪಿಡಿ
5.	ರಾಮ್‌ಥಾಲ್ ಯೋಜನೆಯ ವ್ಯಾಪ್ತಿಯಲ್ಲಿ ಸಾಮಾರ್ಥ್ಯಾಭಿವೃದ್ಧಿ ಮತ್ತು ಉನ್ನತೀಕರಣ ಮಾಡುವುದು
6.	ಮಿಷನ್ ಕಛೇರಿಯನ್ನು ಬೆಂಗಳೂರು ಹಾಗೂ ಜಿಲ್ಲಾ ಮಟ್ಟದಲ್ಲಿ ಸ್ಥಾಪಿಸುವುದು.
7.	ಇಸ್ರೇಲ್ ವಿಶ್ವ ವಿದ್ಯಾಲಯಗಳೊಂದಿಗೆ ಜ್ಞಾನ ವರ್ಗಾಣೆಗಾಗಿ ಒಡಂಬಡಿಕೆ

ಸಂಖ್ಯೆ: HORTI 144 HGM 20

(ನಾರಾಯಣ ಗೌಡ)

ಪೌರಾಡಳಿತ, ತೋಟಗಾರಿಕೆ ಮತ್ತು

ರೇಷ್ಮೆ ಸಚಿವರು

20/03/2020

File No. CI/55/IAP/2020-ID-C&I SEC

ಕರ್ನಾಟಕ ಸರ್ಕಾರ

ಸಂಖ್ಯೆ: ಸಿಐ 55 ಐಎಪಿ(ಇ) 2020

ಕರ್ನಾಟಕ ಸರ್ಕಾರ ಸಚಿವಾಲಯ,
ವಿಕಾಸ ಸೌಧ,
ಬೆಂಗಳೂರು, ದಿನಾಂಕ **18.03.2020.**

34

ಇವರಿಂದ:
ಸರ್ಕಾರದ ಪ್ರಧಾನ ಕಾರ್ಯದರ್ಶಿ,
ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ,
ವಿಕಾಸಸೌಧ, ಬೆಂಗಳೂರು.

ಇವರಿಗೆ:
ಕಾರ್ಯದರ್ಶಿ (ಪ್ರ),
ಕರ್ನಾಟಕ ವಿಧಾನ ಸಭೆ ಸಚಿವಾಲಯ,
ವಿಧಾನಸೌಧ, ಬೆಂಗಳೂರು.

ಮಾನ್ಯರೆ,

ವಿಷಯ: ಮಾನ್ಯ ವಿಧಾನ ಸಭೆ ಸದಸ್ಯರಾದ ಶ್ರೀ ಈಶ್ವರ್ ಖಂಡ್ರೆ (ಭಾಲ್ಕಿ) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: **1962**ಕ್ಕೆ ಉತ್ತರಿಸುವ ಕುರಿತು.

---*---

ಮಾನ್ಯ ವಿಧಾನ ಸಭೆ ಸದಸ್ಯರಾದ ಶ್ರೀ ಈಶ್ವರ್ ಖಂಡ್ರೆ (ಭಾಲ್ಕಿ) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: **1962**ಕ್ಕೆ ಉತ್ತರದ **100** ಪ್ರತಿಗಳನ್ನು ಇದರೊಂದಿಗೆ ಲಗತ್ತಿಸಿ, ಮುಂದಿನ ಕ್ರಮಕ್ಕಾಗಿ ಕಳುಹಿಸಿಕೊಡಲು ನಿರ್ದೇಶಿತನಾಗಿದ್ದೇನೆ.

ತಮ್ಮ ನಂಬುಗೆಯ,

18/3/2020
(ಎನ್. ಕುಮಾರ್)
ಸರ್ಕಾರದ ಅಧೀನ ಕಾರ್ಯದರ್ಶಿ (ಕೈ.ಅ),
ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ.

18/3/2020

ಕರ್ನಾಟಕ ವಿಧಾನ ಸಭೆ

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1962
2. ಸದಸ್ಯರ ಹೆಸರು : ಶ್ರೀ ಈಶ್ವರ್ ಖಂಡ್ರೆ (ಭಾಲ್ಕಿ)
3. ಉತ್ತರಿಸುವ ದಿನಾಂಕ : 20.03.2020
4. ಉತ್ತರಿಸುವ ಸಚಿವರು : ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಸಾರ್ವಜನಿಕ ಉದ್ದಿಮೆಗಳ ಸಚಿವರು

<table>
<tr><th>ಕ್ರ. ಸಂ.</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ.</td><td>ಬೀದರ್ ಜಿಲ್ಲೆಯಲ್ಲಿ ಕೈಗಾರಿಕೆಗಳ ಸ್ಥಾಪನೆಗಾಗಿ ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳ ವ್ಯಾಪ್ತಿಯಲ್ಲಿ ಲಭ್ಯವಿರುವ ಜಾಗವೆಷ್ಟು;</td><td>ಬೀದರ್ ಜಿಲ್ಲೆಯ ವ್ಯಾಪ್ತಿಯಲ್ಲಿನ ಕೊಲ್ಹಾರ್ ಕೈಗಾರಿಕಾ ಪ್ರದೇಶದ 2ನೇ ಹಂತದಲ್ಲಿ ಒಟ್ಟು 157-00 ಎಕರೆ ಜಮೀನು ಹಂಚಿಕೆಗೆ ಲಭ್ಯವಿರುತ್ತದೆ.</td></tr>
<tr><td>ಆ</td><td>ಈ ಬಗ್ಗೆ ಇದುವರೆವಿಗೂ ಮಂಡಳಿಯ ವತಿಯಿಂದ ಎಷ್ಟು ಕೈಗಾರಿಕೆಗಳಿಗೆ ಜಾಗವನ್ನು ವಿತರಿಸಲಾಗಿದೆ ಹಾಗೂ ಇನ್ನೂ ಲಭ್ಯವಿರುವ ಜಾಗದ ಸಂಪೂರ್ಣ ಮಾಹಿತಿ ಒದಗಿಸುವುದು;</td><td>ಬೀದರ್ ಜಿಲ್ಲೆಯಲ್ಲಿ ಕೆ.ಐ.ಎ.ಡಿ.ಬಿ. ವತಿಯಿಂದ ಕೈಗಾರಿಕೆಗಳಿಗೆ ಹಂಚಿಕೆ ಮಾಡಿರುವ ಹಾಗೂ ಲಭ್ಯವಿರುವ ಜಮೀನಿನ ವಿವರ ಈ ಕೆಳಕಂಡಂತಿದೆ:-
<table>
<tr><th>ಕ್ರ. ಸಂ</th><th>ಕೈಗಾರಿಕಾ ಪ್ರದೇಶದ ಹೆಸರು</th><th>ಕೈಗಾರಿಕೆಗಳ ಸಂಖ್ಯೆ</th><th>ಹಂಚಿಕೆಗೆ ಲಭ್ಯವಿರುವ / ಲಭ್ಯವಿಲ್ಲದಿರುವ ಕುರಿತು ಮಾಹಿತಿ</th></tr>
<tr><td>1</td><td>ನೌಬಾದ್ ಕೈಗಾರಿಕಾ ಪ್ರದೇಶ</td><td>66</td><td>ಹಂಚಿಕೆಗೆ ಲಭ್ಯವಿರುವುದಿಲ್ಲ</td></tr>
<tr><td>2</td><td>ನೌಬಾದ್ ಆಟೋನಗರ ಪ್ರದೇಶ ಹಂತ-1</td><td>198</td><td>ಹಂಚಿಕೆಗೆ ಲಭ್ಯವಿರುವುದಿಲ್ಲ</td></tr>
<tr><td>3</td><td>ನೌಬಾದ್ ಆಟೋನಗರ ಪ್ರದೇಶ ಹಂತ-2</td><td>227</td><td>ಹಂಚಿಕೆಗೆ ಲಭ್ಯವಿರುವುದಿಲ್ಲ</td></tr>
<tr><td>4</td><td>ಕೊಲ್ಹಾರ್ ಕೈಗಾರಿಕಾ ಪ್ರದೇಶದ ಹಂತ-1</td><td>298</td><td>ಹಂಚಿಕೆಗೆ ಲಭ್ಯವಿರುವುದಿಲ್ಲ</td></tr>
<tr><td>5</td><td>ಕೊಲ್ಹಾರ್ ಕೈಗಾರಿಕಾ ಪ್ರದೇಶದ ಹಂತ-2</td><td>75</td><td>ಬೀದರ್ ಜಿಲ್ಲೆಯಲ್ಲಿ ಕೊಲ್ಹಾರ್ ಕೈಗಾರಿಕಾ ಪ್ರದೇಶ 2ನೇ ಹಂತದಲ್ಲಿ ಪ್ರಸ್ತುತ ಹಂಚಿಕೆಗೆ ಲಭ್ಯವಿರುವ 157-00 ಎಕರೆ ಜಮೀನಿನ ವಿವರ ಈ ಕೆಳಕಂಡಂತಿದೆ:-
1) 7-00 ಎಕರೆಯಲ್ಲಿ 40 ನಿವೇಶನಗಳ ಹಂಚಿಕೆ ಪ್ರಕ್ರಿಯೆ ಜಾರಿಯಲ್ಲಿರುತ್ತದೆ (ಜಿಲ್ಲಾ ಮಟ್ಟದ ಏಕಗವಾಕ್ಷಿ ಸಮಿತಿ ಸಭೆಯಲ್ಲಿ ಹಂಚಿಕೆಗಾಗಿ ಅನುಮೋದನೆಗೊಂಡಿರುತ್ತವೆ)</td></tr>
</table>
</td></tr>
</table>

					2) 10–00 ಎಕರೆ ಜಮೀನನ್ನು Auto Mechanic cluster ಗಾಗಿ ಮೀಸಲಿಡಲಾಗಿದೆ. 3) 40–00 ಎಕರೆ ಜಮೀನನ್ನು Women's Entrepreneurs Parkಗಾಗಿ ಮೀಸಲಿಡಲಾಗಿದೆ. 4) 50–00 ಎಕರೆ ಜಮೀನನ್ನು Air force Authority land ಗಾಗಿ ಮೀಸಲಿಡಲಾಗಿದೆ. 5) 50–00 ಎಕರೆ ಜಮೀನನ್ನು Agriculture Equipment project ಗಾಗಿ ಮೀಸಲಿಡಲಾಗಿದೆ.
		6	ಹುಮ್ನಾಬಾದ್ ಕೈಗಾರಿಕಾ ಪ್ರದೇಶ	165	ಹಂಚಿಕೆಗೆ ಲಭ್ಯವಿರುವುದಿಲ್ಲ
		7	ಬಸವಕಲ್ಯಾಣ ಕೈಗಾರಿಕಾ ಪ್ರದೇಶ	86	ಹಂಚಿಕೆಗೆ ಲಭ್ಯವಿರುವುದಿಲ್ಲ
		8	ಬಸವಕಲ್ಯಾಣ ಆಟೋನಗರ ಕೈಗಾರಿಕಾ ಪ್ರದೇಶ	194	ಹಂಚಿಕೆಗೆ ಲಭ್ಯವಿರುವುದಿಲ್ಲ
			ಒಟ್ಟು	1309	

ಇ.	ಬೀದರ್ ಜಿಲ್ಲೆಯಲ್ಲಿ ಎಷ್ಟು ಕೈಗಾರಿಕೆಗಳು ಪ್ರಾರಂಭಗೊಂಡಿವೆ ಹಾಗೂ ಎಷ್ಟು ಜನ ಯುವಕರಿಗೆ ಉದ್ಯೋಗ ಕಲ್ಪಿಸಲಾಗಿದೆ;	ಬೀದರ್ ಜಿಲ್ಲೆಯಲ್ಲಿ ಪ್ರಾರಂಭಗೊಂಡಿರುವ ಕೈಗಾರಿಕೆಗಳ ಹಾಗೂ ಉದ್ಯೋಗ ಕಲ್ಪಿಸಿರುವ ವಿವರ ಈ ಕೆಳಕಂಡಂತಿದೆ:-

ಕ್ರ. ಸಂ	ಕೈಗಾರಿಕಾ ಪ್ರದೇಶದ ಹೆಸರು	ಒಟ್ಟು ಕೈಗಾರಿಕೆಗಳ ಸಂಖ್ಯೆ	ಪ್ರಾರಂಭಗೊಂಡಿರುವ ಕೈಗಾರಿಕೆಗಳ ಸಂಖ್ಯೆ	ಉದ್ಯೋಗ ಕಲ್ಪಿಸಿರುವ ಸಂಖ್ಯೆ
1	ನೌಬಾದ ಕೈಗಾರಿಕಾ ಪ್ರದೇಶ	66	52	700
2	ನೌಬಾದ ಆಟೋನಗರ ಪ್ರದೇಶ ಹಂತ–1	198	172	860
3	ನೌಬಾದ ಆಟೋನಗರ ಪ್ರದೇಶ ಹಂತ–2	227	190	570
4	ಕೋಳಾರ ಕೈಗಾರಿಕಾ ಪ್ರದೇಶದ ಹಂತ–1	298	190	2400
5	ಕೋಳಾರ ಕೈಗಾರಿಕಾ ಪ್ರದೇಶದ ಹಂತ–2	75	30	550
6	ಹುಮನಾಬಾದ ಕೈಗಾರಿಕಾ ಪ್ರದೇಶ	165	119	1400
7	ಬಸವಕಲ್ಯಾಣ ಕೈಗಾರಿಕಾ ಪ್ರದೇಶ	86	48	600
8	ಬಸವಕಲ್ಯಾಣ ಆಟೋನಗರ ಪ್ರದೇಶ	194	152	550
	ಒಟ್ಟು	1309	953	7630

ಕರ್ನಾಟಕ ಸರ್ಕಾರ

ಸಂಖ್ಯೆ:ಆನಾಸ 111 ಡಿಆರ್ ಎ 2020 (ಇ-ಆಫೀಸ್)

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಕಾಸಸೌಧ, ನೆಲಮಹಡಿ
ಬೆಂಗಳೂರು ದಿನಾಂಕ:18.03.2020

35 US
20/3/20

ಇವರಿಂದ,

ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ,
ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ
ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖೆ

ಇವರಿಗೆ,

ಕಾರ್ಯದರ್ಶಿಗಳು,
ಕರ್ನಾಟಕ ವಿಧಾನ ಸಭೆ,
ವಿಧಾನಸೌಧ.

ಮಾನ್ಯರೆ,

ವಿಷಯ: ಮಾನ್ಯ ವಿಧಾನ ಸಭೆಯ ಸದಸ್ಯರಾದ ಶ್ರೀ ಹಾಲಾಡಿ ಶ್ರೀನಿವಾಸ ಶೆಟ್ಟಿ (ಕುಂದಾಪುರ) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:1811 ಗೆ ಉತ್ತರ ನೀಡುವ ಬಗ್ಗೆ.

******

ಮಾನ್ಯ ವಿಧಾನ ಸಭೆಯ ಸದಸ್ಯರಾದ ಶ್ರೀ ಹಾಲಾಡಿ ಶ್ರೀನಿವಾಸ ಶೆಟ್ಟಿ (ಕುಂದಾಪುರ) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:1811 ಕ್ಕೆ ಉತ್ತರವನ್ನು ಸಿದ್ಧಪಡಿಸಿ, ಅದರ 100 ಪ್ರತಿಗಳನ್ನು ಇದರೊಂದಿಗೆ ಲಗತ್ತಿಸಿ, ಮುಂದಿನ ಕ್ರಮಕ್ಕಾಗಿ ತಮಗೆ ಕಳುಹಿಸಲು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ವಿಶ್ವಾಸಿ,

(ವಿ.ವೆಂಕಟೇಶ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಆಹಾರ, ನಾಗರಿಕ ಸರಬರಾಜು, ಗ್ರಾಹಕರ ವ್ಯವಹಾರಗಳ
ಮತ್ತು ಕಾನೂನು ಮಾಪನಶಾಸ್ತ್ರ ಇಲಾಖೆ.

ಪ್ರತಿ:

1. ಮಾನ್ಯ ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖಾ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯಕಾರ್ಯದರ್ಶಿ, ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖೆಯ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು.
3. ಸರ್ಕಾರದ ಉಪ ಕಾರ್ಯದರ್ಶಿ, ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖೆಯ ಆಪ್ತ ಸಹಾಯಕಿ, ವಿಕಾಸಸೌಧ, ಬೆಂಗಳೂರು.
4. ಸರ್ಕಾರದ ಅಧೀನ ಕಾರ್ಯದರ್ಶಿ, ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖೆ, ವಿಕಾಸಸೌಧ, ಬೆಂಗಳೂರು.

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1811

ವಿಧಾನ ಸಭೆಯ ಸದಸ್ಯರ ಹೆಸರು : ಶ್ರೀ ಹಾಲಾಡಿ ಶ್ರೀನಿವಾಸ ಶೆಟ್ಟಿ(ಕುಂದಾಪುರ)

ಉತ್ತರಿಸಬೇಕಾದ ದಿನಾಂಕ : 20.03.2020

ಉತ್ತರಿಸುವ ಸಚಿವರು : ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖಾ ಸಚಿವರು.

ಕ್ರ. ಸಂ	ಪ್ರಶ್ನೆ	ಉತ್ತರ
ಅ	ರಾಜ್ಯ ಸರ್ಕಾರದ ಅನಿಲ ಭಾಗ್ಯ ಯೋಜನೆಯಡಿ ಗ್ಯಾಸ್ ಸಂಪರ್ಕ ಪಡೆಯದೇ ಇದ್ದವರು ಪಡಿತರ ಚೀಟಿಗಳಲ್ಲೂ ಸಹ ಗ್ಯಾಸ್ ಸಂಪರ್ಕ ನಮೂದಿಸಲ್ಪಟ್ಟಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಇಲ್ಲ
ಆ	ಬಂದಿದ್ದಲ್ಲಿ, ಈ ರೀತಿ ನಮೂದಿಸಲ್ಪಟ್ಟಿರುವುದರಿಂದ ಫಲಾನುಭವಿಗಳಿಗಾಗಿರುವ ತೊಂದರೆಗೆ ಜವಾಬ್ದಾರರಾರು; ಇದನ್ನು ಸರಿಪಡಿಸಲು ಯಾವ ಕ್ರಮ ಕೈಗೊಳ್ಳಲಾಗುವುದು? (ವಿವರ ನೀಡುವುದು)	ಅನಿಲ ಸಂಪರ್ಕವನ್ನು ನೀಡುವ ಸಂದರ್ಭದಲ್ಲಿ ಆಧಾರ್ ನೊಂದಿಗೆ ಹೊಂದಾಣಿಕೆ ಮಾಡಿದ ನಂತರ ಯಾವುದೇ ಯೋಜನೆಯಡಿ ಅನಿಲ ಸಂಪರ್ಕವನ್ನು ಪಡೆಯದೇ ಇದ್ದಲ್ಲಿ ಅಂತಹ ಕುಟುಂಬಗಳಿಗೆ ಅನಿಲ ಸಂಪರ್ಕವನ್ನು ನೀಡಲಾಗುವುದು.

ಆನಾಸ 111 ಡಿಆರ್ಎ 2020 (ಇ-ಆಫೀಸ್)

(ಕೆ.ಗೋಪಾಲಯ್ಯ)

ಆಹಾರ, ನಾಗರಿಕ ಸರಬರಾಜು ಮತ್ತು
ಗ್ರಾಹಕರ ವ್ಯವಹಾರಗಳ ಹಾಗೂ
ಕಾನೂನು ಮಾಪನಶಾಸ್ತ್ರ ಇಲಾಖಾ ಸಚಿವರು.

ಕರ್ನಾಟಕ ಸರ್ಕಾರ

ಸಂಖ್ಯೆ: HORTI 141 HGM 2020

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿಗಳ ಕಟ್ಟಡ
ಬೆಂಗಳೂರು, ದಿ:19-3-2020

36
415
20/03/2020

ಇವರಿಂದ:
ಸರ್ಕಾರದ ಕಾರ್ಯದರ್ಶಿ
ತೋಟಗಾರಿಕೆ ಇಲಾಖೆ

ಇವರಿಗೆ:
ಕಾರ್ಯದರ್ಶಿಯವರು
ಕರ್ನಾಟಕ ವಿಧಾನ ಸಭಾ ಸಚಿವಾಲಯ,
ವಿಧಾನಸೌಧ, ಬೆಂಗಳೂರು.

ಮಾನ್ಯರೇ,

ವಿಷಯ : ಶ್ರೀ ಎನ್.ಎ.ಹ್ಯಾರೀಸ್, ವಿಸಸ, ಇವರ ಚುಕ್ಕೆಗುರುತಿಲ್ಲದ ಪ್ರಶ್ನೆ: 2668 ರ ಬಗ್ಗೆ.

****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಶ್ರೀ ಎನ್.ಎ.ಹ್ಯಾರೀಸ್, ವಿಸಸ, ಇವರ ಚುಕ್ಕೆಗುರುತಿಲ್ಲದ ಪ್ರಶ್ನೆ: 2668 ಕ್ಕೆ ತೋಟಗಾರಿಕೆ ಇಲಾಖೆಯ ಉತ್ತರದ 100 ಪ್ರತಿಗಳನ್ನು ಇದರೊಂದಿಗೆ ಲಗತ್ತಿಸಿ ಮುಂದಿನ ಕ್ರಮಕ್ಕಾಗಿ ಕಳುಹಿಸಲು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ನಂಬುಗೆಯ

(ಜಿ.ಎಸ್.ಪ್ರಸನ್ನಕುಮಾರ್)
ಸರ್ಕಾರದ ಉಪ ಕಾರ್ಯದರ್ಶಿ
ತೋಟಗಾರಿಕೆ ಇಲಾಖೆ

19/3/20

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ :2668

ಸದಸ್ಯರ ಹೆಸರು : ಶ್ರೀ ಹ್ಯಾರಿಸ್ ಎನ್ ಎ

ಉತ್ತರಿಸಬೇಕಾದ ದಿನಾಂಕ : 20.03.2020.

ಉತ್ತರಿಸಬೇಕಾದ ಸಚಿವರು : ಪೌರಾಡಳಿತ, ತೋಟಗಾರಿಕೆ ಮತ್ತು ರೇಷ್ಮೆ ಸಚಿವರು

<table>
<tr><th>ಕ್ರ ಸಂ</th><th>ಪ್ರಶ್ನೆ</th><th>ಉತ್ತರಗಳು</th></tr>
<tr>
<td>(ಅ)</td>
<td>ತೋಟಗಾರಿಕೆ ಇಲಾಖೆಯ ಆಡಳಿತ ನಿರ್ವಹಣೆಗಾಗಿ ಇರುವ ವಿವಿಧ ದರ್ಜೆಯ ಎಷ್ಟು ಹುದ್ದೆಗಳು ಖಾಲಿ ಇವೆ ಮತ್ತು ಕೊರತೆ ನೀಗಿಸಲು ಸರ್ಕಾರದ ಕ್ರಮಗಳೇನು; (ವಿವರ ನೀಡುವುದು)</td>
<td>
ತೋಟಗಾರಿಕೆ ಇಲಾಖೆಯ ಆಡಳಿತ ನಿರ್ವಹಣೆಗಾಗಿ ಇರುವ ವಿವಿಧ ದರ್ಜೆಯ ಒಟ್ಟು 2406 ಹುದ್ದೆಗಳು ಖಾಲಿ ಇವೆ.
ಹುದ್ದೆಗಳ ವಿವರ ಕೆಳಕಂಡಂತಿರುತ್ತದೆ.
<table>
<tr><td>1</td><td>ಗ್ರೂಪ್-ಎ</td><td>41</td></tr>
<tr><td>2</td><td>ಗ್ರೂಪ್-ಬಿ</td><td>461</td></tr>
<tr><td>3</td><td>ಗ್ರೂಪ್-ಸಿ</td><td>700</td></tr>
<tr><td>4</td><td>ಗ್ರೂಪ್-ಡಿ</td><td>1204</td></tr>
<tr><td></td><td>ಒಟ್ಟು</td><td>2406</td></tr>
</table>
ಈ ಖಾಲಿ ಹುದ್ದೆಗಳ ಕೊರತೆ ನೀಗಿಸಲು ಕೆಳಕಂಡಂತೆ ಕ್ರಮ ಕೈಗೊಳ್ಳಲಾಗಿದೆ.
ಈ ಹುದ್ದೆಗಳ ಪೈಕಿ ಈ ಕೆಳಗೆ ನಮೂದಿಸಿದಂತೆ 987 ವಿವಿಧ ವೃಂದದ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮವಹಿಸಲಾಗಿರುತ್ತದೆ:
<table>
<tr><td>ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು</td><td>08 ಹುದ್ದೆಗಳಿಗೆ ಕರ್ನಾಟಕ ಲೋಕಸೇವಾ ಆಯೋಗದಿಂದ ಅಧಿಸೂಚನೆ ಹೊರಡಿಸಲಾಗಿರುತ್ತದೆ</td></tr>
<tr><td>ಸಹಾಯಕ ತೋಟಗಾರಿಕೆ ಅಧಿಕಾರಿಗಳು</td><td>309 ಹುದ್ದೆಗಳಿಗೆ ಕರ್ನಾಟಕ ಲೋಕಸೇವಾ ಆಯೋಗದಿಂದ ಅಧಿಸೂಚನೆ ಹೊರಡಿಸಲಾಗಿರುತ್ತದೆ</td></tr>
<tr><td>ಪ್ರಥಮ ದರ್ಜೆ ಸಹಾಯಕರು</td><td>48 ಹುದ್ದೆಗಳಿಗೆ ಕರ್ನಾಟಕ ಲೋಕಸೇವಾ ಆಯೋಗದಿಂದ ಅಧಿಸೂಚನೆ ಹೊರಡಿಸಲಾಗಿರುತ್ತದೆ</td></tr>
<tr><td>ದ್ವಿತೀಯ ದರ್ಜೆ ಸಹಾಯಕರು</td><td>22 ಹುದ್ದೆಗಳಿಗೆ ಕರ್ನಾಟಕ ಲೋಕಸೇವಾ ಆಯೋಗದಿಂದ ಅಧಿಸೂಚನೆ ಹೊರಡಿಸಲಾಗಿರುತ್ತದೆ</td></tr>
<tr><td>ತೋಟಗಾರರು</td><td>400 ತೋಟಗಾರರ ಹುದ್ದೆಗಳನ್ನು ಗುತ್ತಿಗೆ ಆಧಾರದ ಮೇಲೆ ನೇಮಕ ಮಾಡಲು ಕ್ರಮವಹಿಸಲಾಗಿದೆ.
200 ತೋಟಗಾರರ ಹುದ್ದೆಗಳ ನೇರ ನೇಮಕಾತಿ ಪ್ರಕ್ರಿಯೆ ಇಲಾಖೆಯಿಂದ ಚಾಲ್ತಿಯಲ್ಲಿದ್ದು ಎಸ್.ಎಸ್.ಎಲ್.ಸಿ ಅಂಕಪಟ್ಟಿಯ ನೈಜತೆ ಪರೀಕ್ಷೆಯ ಕಾರ್ಯ ಪ್ರಗತಿಯಲ್ಲಿದೆ.</td></tr>
</table>
</td>
</tr>
</table>

18

		<table><tr><td>ಒಟ್ಟು</td><td>987</td></tr></table> • ನೇರ ನೇಮಕಾತಿ ಕೋಟಾದಲ್ಲಿ ಖಾಲಿ ಇರುವ ವಿವಿಧ ವೃಂದಗಳ 1071ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಆರ್ಥಿಕ ಇಲಾಖೆಯ ಅನುಮತಿ ಪಡೆಯುವ ಕ್ರಿಯೆ ಪ್ರಕ್ರಿಯೆಯಲ್ಲಿದೆ. • ಭಡ್ತಿ ಕೋಟಾದ ಹುದ್ದೆಗಳನ್ನು ಭಡ್ತಿ ಮೂಲಕ ತುಂಬಲು ಕ್ರಮ ವಹಿಸಲಾಗಿದೆ.
(ಆ)	ಖಾಲಿ ಇರುವ ಹುದ್ದೆಗಳ ಆಯ್ಕೆಯನ್ನು ತ್ವರಿತಗೊಳಿಸುವ ಮತ್ತು ಇಲಾಖೆಯ ಕಾರ್ಯನಿರ್ವಹಣೆಯ ಮೂಲಕ ತೋಟಗಾರಿಕೆ ಬೆಳೆಗಾರರಿಗೆ ಅನುಕೂಲ ಮಾಡಿಕೊಡುವ ದಿಸೆಯಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು? (ವಿವರ ನೀಡುವುದು)	ಖಾಲಿ ಇರುವ ಹುದ್ದೆಗಳ ಆಯ್ಕೆಯನ್ನು ತ್ವರಿತಗೊಳಿಸುವ ಮತ್ತು ಇಲಾಖೆಯ ಕಾರ್ಯನಿರ್ವಹಣೆಯ ಮೂಲಕ ತೋಟಗಾರಿಕೆ ಬೆಳೆಗಾರರಿಗೆ ಅನುಕೂಲ ಮಾಡಿಕೊಡುವ ದಿಸೆಯಲ್ಲಿ ಮೇಲಿನಂತೆ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗಿರುತ್ತದೆ. ಮುಂದುವರೆದು, ಹಾಲಿ ಲಭ್ಯವಿರುವ ಅಧಿಕಾರಿ/ ನೌಕರರ ಸೇವೆಯನ್ನು ಬಳಸಿಕೊಂಡು ತೋಟಗಾರಿಕೆ ಬೆಳೆಗಾರರಿಗೆ ಅನುಕೂಲ ಮಾಡಿಕೊಡಲಾಗಿರುತ್ತದೆ.

ಸಂಖ್ಯೆ: HORTI 141 HGM 2020

(ನಾರಾಯಣ ಗೌಡ)
ಪೌರಾಡಳಿತ, ತೋಟಗಾರಿಕೆ ಮತ್ತು
ರೇಷ್ಮೆ ಸಚಿವರು

ಕರ್ನಾಟಕ ಸರ್ಕಾರ

37

ಸಂಖ್ಯೆ: ನಅಇ 32 ಎಲ್‌ಎಕ್ಯೂ / ~~ಎಲ್‌ಸಿಕ್ಯೂ~~ 2020

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಕಾಸ ಸೌಧ,
ಬೆಂಗಳೂರು, ದಿನಾಂಕ 19-03-2020

ಇವರಿಂದ:
ಸರ್ಕಾರದ ಪ್ರಧಾನ ಕಾರ್ಯದರ್ಶಿ,
ನಗರಾಭಿವೃದ್ಧಿ ಇಲಾಖೆ,
ವಿಕಾಸ ಸೌಧ,
ಬೆಂಗಳೂರು.

ಇವರಿಗೆ:
ಕಾರ್ಯದರ್ಶಿಗಳು,
ಕರ್ನಾಟಕ ವಿಧಾನ ಸಭೆ / ~~ಪರಿಷತ್~~,
ವಿಧಾನ ಸೌಧ,
ಬೆಂಗಳೂರು.

ಮಾನ್ಯರೆ,

ವಿಷಯ:- ಕರ್ನಾಟಕ ವಿಧಾನ ಸಭೆ / ~~ಪರಿಷತ್~~ ಸದಸ್ಯರಾದ ಶ್ರೀ [illegible] ಇವರ ಚುಕ್ಕೆ ~~ಗುರುತಿನ~~ / ಗುರುತಿಲ್ಲದ ಪ್ರಶ್ನೆ ಸಂಖ್ಯೆ: 1810ಕ್ಕೆ ಉತ್ತರ ನೀಡುವ ಬಗ್ಗೆ.

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಕರ್ನಾಟಕ ವಿಧಾನ ಸಭೆ/ ~~ಪರಿಷತ್ತಿನ~~ ಸದಸ್ಯರಾದ ಶ್ರೀ. [illegible] ಇವರು ಮಂಡಿಸಿರುವ ಚುಕ್ಕೆ ~~ಗುರುತಿನ~~ / ಗುರುತಿಲ್ಲದ ಪ್ರಶ್ನೆ ಸಂಖ್ಯೆ: 1810. ಕ್ಕೆ ಉತ್ತರವನ್ನು ತಯಾರಿಸಿದ್ದು, ಇದರ 150 ಪ್ರತಿಗಳನ್ನು ಇದರೊಂದಿಗೆ ಕಳುಹಿಸಲು ನಿರ್ದೇಶಿತನಾಗಿದ್ದೇನೆ.

ತಮ್ಮ ನಂಬುಗೆಯ,

(ಎ.ವಿಜಯಕುಮಾರ್) 19/3
ಸರ್ಕಾರದ ಅಧೀನ ಕಾರ್ಯದರ್ಶಿ,
ನಗರಾಭಿವೃದ್ಧಿ ಇಲಾಖೆ.

ಕರ್ನಾಟಕ ವಿಧಾನಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	1810
ಸದಸ್ಯರ ಹೆಸರು	:	ಶ್ರೀ ಹರ್ಷವರ್ಧನ್ ಬಿ. (ನಂಜನಗೂಡು)
ಉತ್ತರಿಸುವ ದಿನಾಂಕ	:	20.03.2020
ಉತ್ತರಿಸುವ ಸಚಿವರು	:	ಮಾನ್ಯ ಪೌರಾಡಳಿತ, ತೋಟಗಾರಿಕೆ ಮತ್ತು ರೇಷ್ಮೆ ಸಚಿವರು

ಕ್ರ. ಸಂ.	ಪ್ರಶ್ನೆ	ಉತ್ತರ
ಅ)	ರಾಜ್ಯದಲ್ಲಿ ಜಿಲ್ಲಾ ಪಂಚಾಯಿತಿ ಗ್ರಾಮ ಪಂಚಾಯಿತಿಯ ಚುನಾವಣೆಗಳು ಪ್ರಸಕ್ತ ವರ್ಷದಲ್ಲೇ ನಡೆಯಲಿದ್ದು, ಚುನಾವಣೆಯು ನಡೆಯುವ ಸಮಯದಲ್ಲಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಜನವಸತಿ ಪ್ರದೇಶಗಳನ್ನು ಮಹಾನಗರಪಾಲಿಕೆ/ ನಗರಸಭೆ/ ಪುರಸಭೆಗೆ ಸೇರಿಸಿಕೊಳ್ಳುವ ಪ್ರಸ್ತಾವನೆ ಇದ್ದಲ್ಲಿ ಈ ಬಗ್ಗೆ ಅಧಿಸೂಚನೆಯನ್ನು ಹೊರಡಿಸಲಾಗುತ್ತದೆಯೇ; ಸರ್ಕಾರವು ಈ ನಿಟ್ಟಿನಲ್ಲಿ ಕೈಗೊಂಡಿರುವ ಕ್ರಮಗಳಾವುವು;	ಕೇಂದ್ರ ಜನಗಣತಿ ನಿರ್ದೇಶನಾಲಯ, ಭಾರತ ಸರ್ಕಾರದ ದಿನಾಂಕ:16.09.2019ರ ಪತ್ರದನ್ವಯ 2020ರ ಜನಗಣತಿ ಕಾರ್ಯಾಚರಣೆಯ ಅವಧಿಯಾದ ದಿನಾಂಕ:01.01.2020 ರಿಂದ 31.03.2021ರವರೆಗೆ ಹಾಲಿ ಅಸ್ಥಿತ್ವದಲ್ಲಿರುವ ತಾಲ್ಲೂಕುಗಳ, ಗ್ರಾಮ ಪಂಚಾಯಿತಿಗಳ, ಮುನಿಸಿಪಾಲಿಟಿಗಳ ಆಡಳಿತಾತ್ಮಕ ಗಡಿಗಳನ್ನು (Administrative Boundaries) ಮಾರ್ಪಾಡು ಮಾಡದಂತೆ ರಾಜ್ಯ ಸರ್ಕಾರಕ್ಕೆ ಸೂಚಿಸಲಾಗಿರುತ್ತದೆ. ಈ ಹಿನ್ನೆಲೆಯಲ್ಲಿ, ಗ್ರಾಮ ಪಂಚಾಯಿತಿ ವ್ಯಾಪ್ತಿಯ ಜನವಸತಿ ಪ್ರದೇಶಗಳನ್ನು ಮಹಾನಗರಪಾಲಿಕೆ/ ನಗರಸಭೆ/ ಪುರಸಭೆಗೆ ಪ್ರದೇಶಗಳಿಗೆ ಸೇರಿಸಲು ಪ್ರಸ್ತುತ ಅವಕಾಶವಿರುವುದಿಲ್ಲ.
ಆ)	ಮೈಸೂರು ಮಹಾನಗರಪಾಲಿಕೆಯ ವ್ಯಾಪ್ತಿಗೆ ಗ್ರಾಮ ಪಂಚಾಯಿತಿಯ ವ್ಯಾಪ್ತಿಯ ಪ್ರದೇಶಗಳನ್ನು ಸೇರಿಸುವ ಉದ್ದೇಶವಿದೆಯೇ; ಯಾವ ಯಾವ ಗ್ರಾಮ ಪಂಚಾಯಿತಿಗಳು ಹಾಗೂ ಯಾವ ಯಾವ ಗ್ರಾಮಗಳನ್ನು ಸೇರಿಸಲಾಗುತ್ತದೆ; (ವಿವರ ನೀಡುವುದು)	ಮೈಸೂರು ನಗರಕ್ಕೆ ಹೊಂದಿಕೊಂಡಂತೆ ಇರುವ ಗ್ರಾಮ ಪಂಚಾಯಿತಿಗಳನ್ನು ಮೈಸೂರು ಮಹಾನಗರ ಪಾಲಿಕೆಗೆ ಸೇರಿಸುವ ಪ್ರಸ್ತಾವನೆಯು ಸರ್ಕಾರದ ಮುಂದೆ ಇರುತ್ತದೆ. ಜಿಲ್ಲಾಧಿಕಾರಿ, ಮೈಸೂರು ರವರ ಪ್ರಸ್ತಾವನೆಯನುಸಾರ ಶ್ರೀರಾಂಪುರ, ಆಲನಹಳ್ಳಿ ಮತ್ತು ಹಿನಕಲ್ ಗ್ರಾಮ ಪಂಚಾಯಿತಿಗಳನ್ನು ಮೈಸೂರು ಮಹಾನಗರ ಪಾಲಿಕೆ ವ್ಯಾಪ್ತಿಗೆ ಸೇರಿಸಲು ಪ್ರಸ್ತಾಪಿಸಲಾಗಿದೆ.
ಇ)	ನಂಜನಗೂಡು ಪಟ್ಟಣದಲ್ಲಿ ನಗರಸಭೆ ಇದ್ದು, ನಗರಸಭೆಯಿಂದ 2-3 ಕಿ.ಮೀ. ಒಳಗೆ ಬರುವ ಪ್ರದೇಶಗಳನ್ನು ನಗರಸಭೆಯ ವ್ಯಾಪ್ತಿಗೆ ಸೇರಿಸಿಕೊಳ್ಳಲು ಸರ್ಕಾರ ಇಚ್ಛಿಸಿದೆಯೇ; ಹಾಗಿದ್ದಲ್ಲಿ, ಸದರಿ ವ್ಯಾಪ್ತಿಗೆ ಯಾವ ಯಾವ ಪ್ರದೇಶಗಳನ್ನು ಸೇರಿಸಿಕೊಳ್ಳಲಾಗುವುದು? (ವಿವರ ನೀಡುವುದು)	ನಂಜನಗೂಡು ನಗರಸಭೆಯಿಂದ 2-3 ಕಿ.ಮೀ. ಒಳಗೆ ಬರುವ ಪ್ರದೇಶಗಳನ್ನು ನಗರಸಭೆ ವ್ಯಾಪ್ತಿಗೆ ಸೇರ್ಪಡೆಗೊಳಿಸುವ ಕುರಿತು ಪ್ರಸ್ತಾವನೆಯು ಸ್ವೀಕೃತವಾಗಿರುವುದಿಲ್ಲ. ಪ್ರಸ್ತಾವನೆ ಸ್ವೀಕೃತವಾದಲ್ಲಿ ನಿಯಮನುಸಾರ ಪರಿಶೀಲಿಸಿ ಕ್ರಮವಹಿಸಲಾಗುವುದು.

ಸಂಖ್ಯೆ: ನಅಇ 32 ಎಲ್ಎಕ್ಯೂ 2020

(ನಾರಾಯಣ ಗೌಡ)
ಪೌರಾಡಳಿತ, ತೋಟಗಾರಿಕೆ
ಮತ್ತು ರೇಷ್ಮೆ ಸಚಿವರು

ಕರ್ನಾಟಕ ಸರ್ಕಾರ

ಸಂ: ನಅಇ 97 ಪಿಆರ್‌ಜೆ 2020

ಕರ್ನಾಟಕ ಸರ್ಕಾರದ ಸಚಿವಾಲಯ
ವಿಕಾಸ ಸೌಧ
ಬೆಂಗಳೂರು, ದಿನಾಂಕ:-20-03-2020

38
48
20/3/20
5.PM

ಇಂದ:

ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು,
ನಗರಾಭಿವೃದ್ಧಿ ಇಲಾಖೆ.

ಇವರಿಗೆ:

ಕಾರ್ಯದರ್ಶಿಗಳು,
ಕರ್ನಾಟಕ ವಿಧಾನ ಸಭೆ,
ವಿಧಾನ ಸೌಧ,
ಬೆಂಗಳೂರು.

ಮಾನ್ಯರೆ,

ವಿಷಯ: ಕರ್ನಾಟಕ ವಿಧಾನ ಸಭೆಯ ಸದಸ್ಯರಾದ ಶ್ರೀ ಹೂಲಗೇರಿ ಡಿ.ಎಸ್. (ಲಿಂಗಸುಗೂರು) ಇವರು ಮಂಡಿಸಿರುವ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 2688 ಕ್ಕೆ ಉತ್ತರಿಸುವ ಕುರಿತು.

****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಕರ್ನಾಟಕ ವಿಧಾನ ಸಭೆಯ ಸದಸ್ಯರಾದ ಶ್ರೀ ಹೂಲಗೇರಿ ಡಿ.ಎಸ್. (ಲಿಂಗಸುಗೂರು) ಇವರು ಮಂಡಿಸಿರುವ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 2688 ರ ಉತ್ತರದ 50 ಪ್ರತಿಗಳನ್ನು ಇದರೊಂದಿಗೆ ಲಗತ್ತಿಸಿ ಕಳುಹಿಸಲು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ನಂಬುಗೆಯ,

ಲಲಿತಾಬಾಯಿ.ಕೆ

(ಲಲಿತಾಬಾಯಿ. ಕೆ)
ಸರ್ಕಾರದ ಅಧೀನ ಕಾರ್ಯದರ್ಶಿಗಳು (ಪಿ.ಎಂ.ಸಿ),
ನಗರಾಭಿವೃದ್ಧಿ ಇಲಾಖೆ.

ಕರ್ನಾಟಕ ವಿಧಾನ ಸಭೆ

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 2688
2. ಸದಸ್ಯರ ಹೆಸರು : ಶ್ರೀ ಹೂಲಗೇರಿ ಡಿ.ಎಸ್. (ಲಿಂಗಸುಗೂರು)
3. ಉತ್ತರಿಸಬೇಕಾದ ದಿನಾಂಕ : 20-03-2020
4. ಉತ್ತರಿಸುವ ಸಚಿವರು : ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು.

ಕ್ರ ಸಂ	ಪ್ರಶ್ನೆ	ಉತ್ತರ
ಅ)	ರಾಯಚೂರು ಜಿಲ್ಲೆಯ ಲಿಂಗಸುಗೂರು ತಾಲ್ಲೂಕಿನ ಮುದಗಲ್ಲ ಪಟ್ಟಣವನ್ನು ನಗರ ಯೋಜನಾ ಪ್ರಾಧಿಕಾರ ಮಾಡುವ ಪ್ರಸ್ತಾವನೆಗೆ ಸರ್ಕಾರ ತೆಗೆದುಕೊಂಡ ಕ್ರಮವೇನು;	ರಾಯಚೂರು ಜಿಲ್ಲೆಯ ಲಿಂಗಸುಗೂರು ತಾಲ್ಲೂಕಿನ ಮುದಗಲ್ಲ ಪಟ್ಟಣವನ್ನು ನಗರ ಯೋಜನಾ ಪ್ರಾಧಿಕಾರವನ್ನಾಗಿ ಘೋಷಿಸಲು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರನ್ವಯ ಸ್ಥಳೀಯ ಜನ ಪ್ರದೇಶ ಘೋಷಿಸುವ ಪೂರ್ವದಲ್ಲಿ ಮುದಗಲ್ಲ ಪುರಸಭೆ ವ್ಯಾಪ್ತಿಯ ಹಾಲಿ ನಕ್ಷೆಗೂ ಹಾಗೂ ಪುರಸಭೆ ಗಡಿಯ ಕುರಿತಾದ ಅಧಿಸೂಚನೆಗಳಗೂ ತಾಳೆ ಹೊಂದುತ್ತಿಲ್ಲದ ಕಾರಣ ಅಧಿಸೂಚನೆಯಲ್ಲಿನ ನ್ಯೂನತೆಗಳನ್ನು ಸರಿಪಡಿಸಿ, ಪುರಸಭೆ ವ್ಯಾಪ್ತಿಗೆ ಪರಿಷ್ಕೃತ ಅಧಿಸೂಚನೆ ಹೊರಡಿಸಲು ಯೋಜನಾ ನಿರ್ದೇಶಕರು, ಜಿಲ್ಲಾ ನಗರಾಭಿವೃದ್ಧಿ ಕೋಶ, ಜಿಲ್ಲಾಧಿಕಾರಿಗಳ ಕಛೇರಿ, ರಾಯಚೂರು ಜಿಲ್ಲೆ ಇವರು ಸಲ್ಲಿಸಲಾಗಿರುವ ಪ್ರಸ್ತಾವನೆಯನ್ನು ಸರ್ಕಾರದಲ್ಲಿ ಪರಿಶೀಲಿಸಲಾಗುತ್ತಿದೆ. ಪರಿಷ್ಕೃತ ಅಧಿಸೂಚನೆ ಹೊರಡಿಸಿದ ನಂತರ ಮುದಗಲ್ಲ ಪುರಸಭೆ ವ್ಯಾಪ್ತಿಯನ್ನು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಅವಕಾಶಗಳನ್ವಯ ಸ್ಥಳೀಯ ಯೋಜನಾ ಪ್ರದೇಶವೆಂದು ಘೋಷಿಸಲು ಕ್ರಮವಹಿಸಲಾಗುವುದು.
ಆ)	ಮುದಗಲ್ಲ ಪಟ್ಟಣದಲ್ಲಿ ಒಳಚರಂಡಿ ನಿರ್ಮಾಣ ಮಾಡುವ ಯೋಜನೆಗೆ ಸರ್ಕಾರ ಕೈಗೊಂಡ ಕ್ರಮಗಳೇನು;	ಮುಖ್ಯಾಧಿಕಾರಿಗಳು, ಪುರಸಭೆ, ಮುದಗಲ್ಲ ರವರಿಂದ ಒಳಚರಂಡಿ ನಿರ್ಮಾಣ ಮಾಡುವ ಯೋಜನೆಗೆ ಸಂಬಂಧಿಸಿದಂತೆ, ಸರ್ಕಾರಕ್ಕೆ ಪ್ರಸ್ತಾವನೆ ಬಂದಲ್ಲಿ ಸೂಕ್ತ ಕ್ರಮವಹಿಸಲಾಗುವುದು.
ಇ)	ಸದರಿ ಪಟ್ಟಣದಲ್ಲಿ 24/7 ಕುಡಿಯುವ ನೀರಿನ ಯೋಜನೆ ಯಾವ ವರ್ಷದಲ್ಲಿ ಮಂಜೂರು ಮಾಡಲಾಗಿದೆ; ಸದರಿ ಯೋಜನೆಗೆ ಮಂಜೂರಾಗಿರುವ ಅನುದಾನವೆಷ್ಟು; ಪ್ರಸ್ತುತ ಕುಡಿಯುವ ನೀರಿನ ಸರಬರಾಜು ಯೋಜನೆಯ ಕಾಮಗಾರಿಯು ಮಂದಗತಿಯಲ್ಲಿ ಸಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಮುದಗಲ್ಲ ಪಟ್ಟಣಕ್ಕೆ 24/7 ಕುಡಿಯುವ ನೀರಿನ ಯೋಜನೆ ಮಂಜೂರಾಗಿರುವುದಿಲ್ಲ. ಆದರೆ 9 ಪಟ್ಟಣಗಳ ಯೋಜನೆಯಡಿ ಸದರಿ ಪಟ್ಟಣಕ್ಕೆ ಕುಡಿಯುವ ನೀರಿನ ಯೋಜನೆಯನ್ನು ಅನುಷ್ಠಾನಗೊಳಸಲು ಸರ್ಕಾರದ ಆದೇಶ ಸಂಖ್ಯೆ:ನ.ಅ.ಇ 14 ಪಿಆರ್‌ಜೆ 2012, ದಿನಾಂಕ:06.04.2017 ರಲ್ಲಿ 9 ಪಟ್ಟಣಗಳಿಗೆ ರೂ.205.87 ಕೋಟಿ ಅಂದಾಜು ವೆಚ್ಚದಲ್ಲಿ ಮಂಜೂರಾತಿ ನೀಡಿದೆ. ಸದರಿ ಯೋಜನೆಯಲ್ಲಿ ಮುದಗಲ್ಲ ಪಟ್ಟಣವೂ ಒಂದಾಗಿದ್ದು ರೂ.34.96 ಕೋಟಿಗಳು ಮಂಜೂರು ಆಗಿರುತ್ತದೆ. ಪ್ರಸ್ತುತ ಕುಡಿಯುವ ನೀರಿನ ಸರಬರಾಜು ಯೋಜನೆಯ ಕಾಮಗಾರಿಯು ಮಂದಗತಿಯಲ್ಲಿ ಸಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದ್ದು, ಮುಖ್ಯಾಧಿಕಾರಿಗಳು ಪುರಸಭೆ ಮತ್ತು ಕೆಯುಐಡಿಎಫ್‌ಸಿ ವತಿಯಿಂದ ಗುತ್ತಿಗೆದಾರರಿಗೆ ತ್ವರಿತ ಗತಿಯಲ್ಲಿ ಕಾಮಗಾರಿಯನ್ನು ಮುಗಿಸಲು ಟೆಂಡರ್ ಕರಾರಿನಂತೆ ನೋಟಿಸ್‌ಗಳನ್ನು ನೀಡಲಾಗಿರುತ್ತದೆ.

ಈ)	ಹಾಗಿದ್ದಲ್ಲಿ, ಸದರಿ ಕಾಮಗಾರಿಯನ್ನು ಶೀಘ್ರವಾಗಿ ಪೂರೈಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು? (ವಿವರ ನೀಡುವುದು)	ಮುದಗಲ್ಲ ಪಟ್ಟಣದ ಕುಡಿಯುವ ನೀರಿನ ಕಾಮಗಾರಿಯಲ್ಲಿ ಸಿವಿಲ್ ಕಾಮಗಾರಿಗಳಾದ ಇನ್‌ಟೇಕ್, ಪೈಪ್, ಜಾಕೆವೆಲ್, ರೈಸಿಂಗ್ ಮೈನ್, ಡಿಸ್ಟ್ರಿಬ್ಯೂಷನ್ ಪೈಪ್‌ಲೈನ್, ಹೌಸ್ ಸರ್ವಿಸ್ ಕನೆಕ್ಷನ್, ಶುದ್ಧ ನೀರಿನ ಘಟಕ, 10 ಲಕ್ಷ ಲೀಟರ್ ಸಾಮರ್ಥ್ಯದ ಓ.ಹೆಚ್.ಟಿ, 10 ಲಕ್ಷ ಲೀಟರ್ ಸಾಮರ್ಥ್ಯದ ಜಿ.ಎಲ್.ಎಸ್.ಆರ್ ಗಳದ್ದು ಮತ್ತು ಎಲೆಕ್ಟ್ರಿಕಲ್ ಕಾಮಗಾರಿಗಳಾದ ಪಂಪ್ ಮತ್ತು ಮೋಟರ್‌ಗಳನ್ನು ಅಳವಡಿಸುವ ಕಾಮಗಾರಿಗಳರುತ್ತವೆ. ಸದರಿ ಕಾಮಗಾರಿಯನ್ನು ಗುತ್ತಿಗೆದಾರರಾದ ಮೇ॥ ಎ.ಎಸ್.ಆರ್ ಇಂಜಿನೀಯರಿಂಗ್ & ಪ್ರಾಜೆಕ್ಟ್ಸ್ ಲಿಮಿಟೆಡ್, ಹೈದ್ರಾಬಾದ್ ರವರಿಗೆ 07.03.2018 ರಂದು ರೂ.31.29 ಕೋಟಿಗಳಿಗೆ ಕೆ.ಟಿ.ಟಿ.ಪಿ ನಿಯಮದಡಿ ಟೆಂಡರ್ ಕರೆದು, ಟೆಂಡರ್ ಗುತ್ತಿಗೆಯನ್ನು ನೀಡಲಾಗಿರುತ್ತದೆ. ಸದರಿ ಕಾಮಗಾರಿಯ ಅನುಷ್ಠಾನದ ಅವಧಿ 18 ತಿಂಗಳಾಗಿದ್ದು ದಿನಾಂಕ:06.09.2019 ರೊಳಗೆ ಕಾಮಗಾರಿಗಳು ಪೂರ್ಣಗೊಳಿಸಬೇಕಾಗಿತ್ತು. ದಿನಾಂಕ: 09.01.2020 ರಂದು ನಡೆದ 7ನೇ EFI ಸಮಿತಿಯ ಸಭೆಯಲ್ಲಿ ಸದರಿ ಕಾಮಗಾರಿಗೆ ದಿನಾಂಕ: 30.06.2020 ರವರೆಗೆ ವಿಸ್ತರಣೆ ನೀಡಲಾಗಿದ್ದು, ಇಲ್ಲಿಯವರೆಗೆ ಶೇಕಡ 32.42 ರಷ್ಟು ಭೌತಿಕ ಹಾಗೂ ಆರ್ಥಿಕ 17.45% ರಷ್ಟು ಪ್ರಗತಿಯನ್ನು ಗುತ್ತಿಗೆದಾರರು ಸಾಧಿಸಿರುತ್ತಾರೆ. ಸದರಿ ಯೋಜನೆಯನ್ನು ನಿಗಧಿತ ಅವಧಿಯೊಳಗೆ ಮುಗಿಸಲು ಗುತ್ತಿಗೆದಾರರಿಗೆ, ಮುಖ್ಯಾಧಿಕಾರಿಗಳು ಮುದಗಲ್ಲ ಪುರಸಭೆ ಮತ್ತು ಕೆ.ಯು.ಐ.ಡಿ.ಎಫ್.ಸಿ ಯ ಪಿ.ಐ.ಯು ಸಿಬ್ಬಂಧಿಯವರಿಗೆ ಪ್ರತಿ ಮಾಹೆ ನಡೆಯುವ ಕೇಂದ್ರ ಕಛೇರಿಯ ಪ್ರಗತಿ ಪರಿಶೀಲನೆ ಸಭೆಯಲ್ಲಿ ಸೂಚನೆಗಳನ್ನು ನೀಡಲಾಗುತ್ತಿದೆ ಹಾಗೂ ಮುದಗಲ್ಲ ಪಟ್ಟಣದಲ್ಲಿ ನಿಗಧಿತ ಅವಧಿಯೊಳಗೆ ಕಾಮಗಾರಿ ಕೈಗೊಳ್ಳದಿರುವುದರಿಂದ ದಿನಾಂಕ:09.01.2020 ರಲ್ಲಿ ನಡೆದ 7ನೇ EFI ಸಮಿತಿಯ ಸಭೆಯಲ್ಲಿ ಟೆಂಡರ್ ಕರಾರಿನ ಷರತ್ತು 41 ರಂತೆ ರೂ.8.35 ಲಕ್ಷಗಳ ದಂಡವನ್ನು ವಿಧಿಸಲಾಗಿರುತ್ತದೆ. ಸದರಿ ಮೊತ್ತವನ್ನು ಗುತ್ತಿಗೆದಾರರ ಚಾಲ್ತಿ ಬಿಲ್‌ನಲ್ಲಿ ಕಟಾಯಿಸಲಾಗಿರುತ್ತದೆ. ಮುದಗಲ್ಲ ಪಟ್ಟಣದ ಕುಡಿಯುವ ನೀರಿನ ಸಂಬಂಧ ರಾಂಪೂರ ಏತ ನೀರಾವರಿ ಯೋಜನೆಯ ಇನ್‌ಟೇಕ್ ಕೆನಾಲ್‌ನಿಂದ 900 ಎಂ.ಎಂ ವ್ಯಾಸದ ಆರ್.ಸಿ.ಸಿ ಪೈಪ್ ಮೂಲಕ ಜಾಕ್‌ವೆಲ್‌ಗೆ ಕೃಷ್ಣಾ ಭಾಗ್ಯ ಜಲ ನಿಗಮ ನಿಯಮಿತ ರವರಿಂದ ಅನುಮತಿಯನ್ನು ಪಡೆಯಲಾಗಿದ್ದು ಅದರಂತೆ, ಮುಂದಿನ ದಿನಗಳಲ್ಲಿ ಜಾಕ್‌ವೆಲ್ ಕಾಮಗಾರಿಯನ್ನು ತ್ವರಿತ ಗತಿಯಲ್ಲಿ ಪೂರ್ಣಗೊಳಿಸಲಾಗುವುದು.

ಕಡತ ಸಂಖ್ಯೆ: ನಅಇ 97 ಪಿ.ಆರ್.ಜೆ 2020

(ನಾರಾಯಣ ಗೌಡ)
ಪೌರಾಡಳಿತ ಹಾಗೂ ತೋಟಗಾರಿಕೆ
ಮತ್ತು ರೇಷ್ಮೆ ಸಚಿವರು.

(60)

ಕರ್ನಾಟಕ ಸರ್ಕಾರ

ಸಂಖ್ಯೆ:ಆನಾಸ 116ಡಿಆರ್ ಎ 2020 (ಇ-ಆಫೀಸ್)

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಕಾಸಸೌಧ, ನೆಲಮಹಡಿ
ಬೆಂಗಳೂರು ದಿನಾಂಕ: 19.03.2020

20/3

ಇವರಿಂದ,

ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ,
ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ
ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖೆ

ಇವರಿಗೆ,

ಕಾರ್ಯದರ್ಶಿಗಳು,
ಕರ್ನಾಟಕ ವಿಧಾನ ಸಭೆ,
ವಿಧಾನಸೌಧ.

ಮಾನ್ಯರೆ,

ವಿಷಯ: ಮಾನ್ಯ ವಿಧಾನ ಸಭೆಯ ಸದಸ್ಯರಾದ ಕೌಜಲಗಿ ಮಹಾಂತೇಶ್ ಶಿವಾನಂದ್ (ಬೈಲಹೊಂಗಲ) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:2701 ಗೆ ಉತ್ತರ ನೀಡುವ ಬಗ್ಗೆ.

******

ಮಾನ್ಯ ವಿಧಾನ ಸಭೆಯ ಸದಸ್ಯರಾದ ಶ್ರೀ ಕೌಜಲಗಿ ಮಹಾಂತೇಶ್ ಶಿವಾನಂದ್ (ಬೈಲಹೊಂಗಲ) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 2701 ಕ್ಕೆ ಉತ್ತರವನ್ನು ಸಿದ್ಧಪಡಿಸಿ, ಅದರ 100 ಪ್ರತಿಗಳನ್ನು ಇದರೊಂದಿಗೆ ಲಗತ್ತಿಸಿ, ಮುಂದಿನ ಕ್ರಮಕ್ಕಾಗಿ ತಮಗೆ ಕಳುಹಿಸಲು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ವಿಶ್ವಾಸಿ,

(ವಿ.ವೆಂಕಟೇಶ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಆಹಾರ, ನಾಗರಿಕ ಸರಬರಾಜು, ಗ್ರಾಹಕರ ವ್ಯವಹಾರಗಳ
ಮತ್ತು ಕಾನೂನು ಮಾಪನಶಾಸ್ತ್ರ ಇಲಾಖೆ.

ಪ್ರತಿ:

1. ಮಾನ್ಯ ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖಾ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯಕಾರ್ಯದರ್ಶಿ, ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖೆಯ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು.
3. ಸರ್ಕಾರದ ಉಪ ಕಾರ್ಯದರ್ಶಿ, ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖೆಯ ಆಪ್ತ ಸಹಾಯಕಿ, ವಿಕಾಸಸೌಧ, ಬೆಂಗಳೂರು.
4. ಸರ್ಕಾರದ ಅಧೀನ ಕಾರ್ಯದರ್ಶಿ, ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖೆ, ವಿಕಾಸಸೌಧ, ಬೆಂಗಳೂರು.

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 2701

ವಿಧಾನ ಸಭೆಯ ಸದಸ್ಯರ ಹೆಸರು : ಶ್ರೀ ಕೌಜಲಗಿ ಮಹಾಂತೇಶ್ ಶಿವಾನಂದ್ (ಬೈಲಹೊಂಗಲ)

ಉತ್ತರಿಸಬೇಕಾದ ದಿನಾಂಕ : 20.03.2020

ಉತ್ತರಿಸುವ ಸಚಿವರು : ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖಾ ಸಚಿವರು.

ಕ್ರ. ಸಂ	ಪ್ರಶ್ನೆ	ಉತ್ತರ
ಅ	ಬೆಳಗಾವಿ ಜಿಲ್ಲೆ ಬೈಲಹೊಂಗಲ ಮತಕ್ಷೇತ್ರದಲ್ಲಿ ಬಿ.ಪಿ.ಎಲ್ ಕಾರ್ಡ್‌ಗಾಗಿ ಅರ್ಜಿಯನ್ನು ಸಲ್ಲಿಸಿರುವವರ ಸಂಖ್ಯೆ ಎಷ್ಟು;	ಬೆಳಗಾವಿ ಜಿಲ್ಲೆ ಬೈಲಹೊಂಗಲ ಮತಕ್ಷೇತ್ರದಲ್ಲಿ ಬಿ.ಪಿ.ಎಲ್ ಪಡಿತರ ಚೀಟಿಗಾಗಿ 1048 ಅರ್ಜಿಗಳನ್ನು ಸಲ್ಲಿಸಲಾಗಿದೆ. ಇದರಲ್ಲಿ 679 ಪಡಿತರ ಚೀಟಿಗಳನ್ನು ನೀಡಲಾಗಿದೆ, 89 ಅರ್ಜಿಗಳು ರದ್ದುಗೊಂಡಿರುತ್ತವೆ, 280 ಅರ್ಜಿಗಳು ಬಾಕಿ ಉಳಿದಿರುತ್ತವೆ.
ಆ	ಸಾಫ್ಟ್‌ವೇರ್ ತೊಂದರೆಯಿಂದ ಅರ್ಜಿದಾರರಿಗೆ ಸರಿಯಾದ ಸಮಯದಲ್ಲಿ ಕಾರ್ಡ್ ದೊರಕದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಜನವರಿ-2020 ರ ಮಾಹೆಯಲ್ಲಿ ಮಾತ್ರ ಸರ್ವರ್‌ನ ತಾಂತ್ರಿಕ ದೋಷದಿಂದ ದಿನಾಂಕ: 21.01.2020 ರಿಂದ ತಿಂಗಳ ಕೊನೆಯವರೆಗೆ ನ್ಯಾಯಬೆಲೆ ಅಂಗಡಿಗಳಲ್ಲಿ ಸಂಪೂರ್ಣವಾಗಿ ಪಡಿತರವನ್ನು ಆನ್ ಲೈನ್ ನಲ್ಲಿ ವಿತರಿಸಲು ಆಗಿರುವುದಿಲ್ಲ. ಈ ಹಿನ್ನೆಲೆಯಲ್ಲಿ ಸರ್ವರ್ ಸಮಸ್ಯೆ ಇರುವ ನ್ಯಾಯಬೆಲೆ ಅಂಗಡಿಗಳಲ್ಲಿ ಆಫ್ ಲೈನ್ ಮೂಲಕ ಪಡಿತರ ಚೀಟಿದಾರರ ಸಹಿ ಪಡೆದು ಪಡಿತರ ವಿತರಿಸಲಾಗಿರುತ್ತದೆ. ವಿತರಿಸಲಾದ ಮಾಹಿತಿಯನ್ನು ನಂತರ ಆನ್ ಲೈನ್ ನಲ್ಲಿ ಅಪ್‌ಲೋಡ್ ಮಾಡಲಾಗಿರುತ್ತದೆ. ಪ್ರಸ್ತುತ ಪರಿಹರಿಸಲಾಗಿದ್ದು, ಫೆಬ್ರವರಿ-2020ರ ಮಾಹೆಯಿಂದ ಪಡಿತರ ವಿತರಣೆಯಲ್ಲಿ ಯಾವುದೇ ಸಮಸ್ಯೆ ಇರುವುದಿಲ್ಲ.

ಇ)	ಹಾಗಿದ್ದಲ್ಲಿ, ಅರ್ಜಿದಾರರಿಗೆ ತೊಂದರೆಯಾಗದಂತೆ ಸರ್ಕಾರ ಕೈಗೊಂಡ ಕ್ರಮಗಳೇನು? (ವಿವರ ನೀಡುವುದು)	ಮೇಲಿನಂತೆ.

ಆನಾಸ 116 ಡಿಆರ್‌ಎ 2020 (ಇ-ಆಫೀಸ್)

(ಕೆ.ಗೋಪಾಲಯ್ಯ)

ಆಹಾರ, ನಾಗರಿಕ ಸರಬರಾಜು ಮತ್ತು

ಗ್ರಾಹಕರ ವ್ಯವಹಾರಗಳ ಹಾಗೂ

ಕಾನೂನು ಮಾಪನಶಾಸ್ತ್ರ ಇಲಾಖಾ ಸಚಿವರು.

ಕರ್ನಾಟಕ ಸರ್ಕಾರ

ಸಂಖ್ಯೆ: ನಅಇ 54 ಜಿಇಎಲ್ 2020

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಕಾಸಸೌಧ,
ಬೆಂಗಳೂರು, ದಿನಾಂಕ: 20/03/2020

ಇವರಿಂದ:

ಸರ್ಕಾರದ ಪ್ರಧಾನ ಕಾರ್ಯದರ್ಶಿ,
ನಗರಾಭಿವೃದ್ಧಿ ಇಲಾಖೆ,
ವಿಕಾಸಸೌಧ, ಬೆಂಗಳೂರು.

'ಜರೂರು'

ಇವರಿಗೆ:

ಕಾರ್ಯದರ್ಶಿಗಳು,
ಕರ್ನಾಟಕ ವಿಧಾನ ಸಭೆ ಸಚಿವಾಲಯ,
ವಿಧಾನಸೌಧ, ಬೆಂಗಳೂರು.

ಮಾನ್ಯರೇ,

ವಿಷಯ: ಮಾನ್ಯ ವಿಧಾನ ಸಭೆಯ ಸದಸ್ಯರಾದ ಶ್ರೀ **ಕೌಜಲಗಿ ಮಹಾಂತೇಶ್ ಶಿವಾನಂದ್** (**ಬೈಲಹೊಂಗಲ**) ಇವರ **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 2702ಕ್ಕೆ** ಉತ್ತರ ಕಳುಹಿಸುವ ಬಗ್ಗೆ.

** ** **

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಮಾನ್ಯ ವಿಧಾನ ಸಭೆ ಸದಸ್ಯರಾದ ಶ್ರೀ **ಕೌಜಲಗಿ ಮಹಾಂತೇಶ್ ಶಿವಾನಂದ್ (ಬೈಲಹೊಂಗಲ)** ಇವರ **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 2702ಕ್ಕೆ** ಉತ್ತರದ 100 ಪ್ರತಿಗಳನ್ನು ಇದರೊಂದಿಗೆ ಲಗತ್ತಿಸಿ ಮುಂದಿನ ಸೂಕ್ತ ಕ್ರಮಕ್ಕಾಗಿ ಕಳುಹಿಸಲು ನಿರ್ದೇಶಿಸಲ್ಪಟ್ಟಿದ್ದೇನೆ.

(ಲಕ್ಷ್ಮೀಕಾಂತ.ಟಿ)
ಶಾಖಾಧಿಕಾರಿ
ನಗರಾಭಿವೃದ್ಧಿ ಇಲಾಖೆ.

<u>ಪ್ರತಿಯನ್ನು:</u>

1) ಮಾನ್ಯ ಪೌರಾಡಳಿತ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
2) ಸರ್ಕಾರದ ಅಧೀನ ಕಾರ್ಯದರ್ಶಿ, ನಗರಾಭಿವೃದ್ಧಿ ಇಲಾಖೆ (ಸಮನ್ವಯ).

ಕರ್ನಾಟಕ ವಿಧಾನಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 2702
ಸದಸ್ಯರ ಹೆಸರು : ಶ್ರೀ ಕೌಜಲಗಿ ಮಹಾಂತೇಶ್ ಶಿವಾನಂದ್ (ಬೈಲಹೊಂಗಲ)
ಉತ್ತರಿಸಬೇಕಾದ ದಿನಾಂಕ : 20.03.2020
ಉತ್ತರಿಸುವವರು : ಪೌರಾಡಳಿತ, ತೋಟಗಾರಿಕೆ ಹಾಗೂ ರೇಷ್ಮೆ ಸಚಿವರು

ಕ್ರ.ಸಂ	ಪ್ರಶ್ನೆ	ಉತ್ತರ
ಅ	ಬೆಳಗಾವಿ ಜಿಲ್ಲೆ ಬೈಲಹೊಂಗಲ ಮತಕ್ಷೇತ್ರದಲ್ಲಿ ವೀರರಾಣಿ ಕಿತ್ತೂರು ಚೆನ್ನಮ್ಮನ ಸಮಾಧಿಯ ಸ್ಥಳದಲ್ಲಿ ಸಂಗೊಳ್ಳಿ ರಾಯಣ್ಣನ ಉದ್ಯಾನವನ ಇರುವುದು ನಿಜವಲ್ಲವೇ;	ಬೈಲಹೊಂಗಲ ಪಟ್ಟಣ ಪ್ರದೇಶದ ವ್ಯಾಪ್ತಿಯಲ್ಲಿ ವೀರ ರಾಣಿ ಕಿತ್ತೂರು ಚನ್ನಮ್ಮ ಉದ್ಯಾನವನವಿರುತ್ತದೆ ಹಾಗೂ ಸಂಗೊಳ್ಳಿ ರಾಯಣ್ಣ ಉದ್ಯಾನವನ ಪಟ್ಟಣ ಪ್ರದೇಶದ ಸಂಗೊಳ್ಳಿ ರಾಯಣ್ಣ ಸರ್ಕಲ್ ಹತ್ತಿರ ಇರುತ್ತದೆ.
ಆ	ಸ್ವಾತಂತ್ರ್ಯಕ್ಕಾಗಿ ಹೋರಾಡಿದ ವೀರರ ಗಾರ್ಡನ್ ಸಂಪೂರ್ಣವಾಗಿ ದುಸ್ಥಿತಿಯಲ್ಲಿದ್ದು, ಅದನ್ನು ಅಭಿವೃದ್ಧಿಪಡಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಪಂಚಾಯತ್‌ರಾಜ್ ಇಂಜಿನಿಯರಿಂಗ್ ವಿಭಾಗ, ಬೈಲಹೊಂಗಲ ರವರ ವತಿಯಿಂದ ಚನ್ನಮ್ಮ ಸಮಾಧಿಯ ಉದ್ಯಾನವನದಲ್ಲಿ ರೂ. 91.00 ಲಕ್ಷಗಳ ಅನುದಾನದಲ್ಲಿ ಗಾರ್ಡನ್ ಅಭಿವೃದ್ಧಿ ಮತ್ತು ಸ್ಮಾರಕ ಭವನ ಹಾಗೂ ಆವರಣ ಗೋಡೆ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲಾಗಿರುತ್ತದೆ. 2018-19ನೇ ಸಾಲಿನ 14ನೇ ಹಣಕಾಸು ಸಾಮಾನ್ಯ ನಿಧಿ ಯೋಜನೆಯಡಿ ಸಂಗೊಳ್ಳಿ ರಾಯಣ್ಣ ಗಾರ್ಡನ್ ನಲ್ಲಿ ಪುರಸಭೆ ವತಿಯಿಂದ ರೂ.4.50 ಲಕ್ಷಗಳ ಅನುದಾನದಡಿ ಉದ್ಯಾನವನ ಅಭಿವೃದ್ಧಿಪಡಿಸಲಾಗಿರುತ್ತದೆ ಹಾಗೂ ಸದರಿ ಉದ್ಯಾನವನಗಳನ್ನು ಪುರಸಭೆಯಿಂದ ನಿರ್ವಹಣೆ ಮಾಡಲಾಗುತ್ತಿರುತ್ತದೆ.
ಇ	ಹಾಗಿದ್ದಲ್ಲಿ, ಸದರಿ ಗಾರ್ಡನ್ ಅಭಿವೃದ್ಧಿಗಾಗಿ ಕೂಡಲೇ ಹಣವನ್ನು ಬಿಡುಗಡೆ ಮಾಡಿ ಅಭಿವೃದ್ಧಿ ಪಡಿಸಲು ಸರ್ಕಾರ ಕೈಗೊಳ್ಳುವ ಕ್ರಮಗಳೇನು?	ಆಯುಕ್ತರು, ಕಿತ್ತೂರು ಅಭಿವೃದ್ಧಿ ಪ್ರಾಧಿಕಾರ ಹಾಗೂ ಉಪವಿಭಾಗಾಧಿಕಾರಿಗಳು, ಬೈಲಹೊಂಗಲ ಇವರ ವರದಿಯನ್ವಯ ಸದರಿ ಗಾರ್ಡನ್‌ನ್ನು ಇನ್ನೂ ಹೆಚ್ಚಿನ ಅಭಿವೃದ್ಧಿಪಡಿಸಲು ಕಿತ್ತೂರು ಅಭಿವೃದ್ಧಿ ಪ್ರಾಧಿಕಾರದಡಿ ತಯಾರಾಗುತ್ತಿರುವ ಮಹಾಯೋಜನೆಯಲ್ಲಿ ಅಳವಡಿಸಲಾಗಿದೆ.

ಸಂಖ್ಯೆ: ನಅಇ 54 ಜೆಇಎಲ್ 2020

(ನಾರಾಯಣ ಗೌಡ)
ಪೌರಾಡಳಿತ, ತೋಟಗಾರಿಕೆ ಹಾಗೂ ರೇಷ್ಮೆ ಸಚಿವರು

ಕರ್ನಾಟಕ ಸರ್ಕಾರ

ಸಂಖ್ಯೆ: ರೇಷ್ಮೆ 47 ರೇಕೃವಿ 2020

ಕರ್ನಾಟಕ ಸರ್ಕಾರದ ಸಚಿವಾಲಯ
ವಿಕಾಸ ಸೌಧ,
ಬೆಂಗಳೂರು, ದಿನಾಂಕ: 19-03-2020

ಇವರಿಂದ:
ಸರ್ಕಾರದ ಕಾರ್ಯದರ್ಶಿ,
ತೋಟಗಾರಿಕೆ ಮತ್ತು ರೇಷ್ಮೆ ಇಲಾಖೆ,
ಬಹುಮಹಡಿ ಕಟ್ಟಡ, ಬೆಂಗಳೂರು.

42
20/3/20

ಇವರಿಗೆ:
ಕಾರ್ಯದರ್ಶಿ,s
ಕರ್ನಾಟಕ ವಿಧಾನ ಸಭೆ,
ವಿಧಾನಸೌಧ, ಬೆಂಗಳೂರು.

ಮಾನ್ಯರೇ,

ವಿಷಯ: ವಿಧಾನ ಸಭೆ ಸದಸ್ಯರಾದ ಶ್ರೀ ಕೌಜಲಗಿ ಮಹಾಂತೇಶ್ ಶಿವಾನಂದ್ ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 2703 ಕ್ಕೆ ಉತ್ತರ ಒದಗಿಸುವ ಕುರಿತು.

****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ವಿಧಾನ ಸಭೆ ಸದಸ್ಯರಾದ ಶ್ರೀ ಕೌಜಲಗಿ ಮಹಾಂತೇಶ್ ಶಿವಾನಂದ್ ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 2703 ಗೆ ಉತ್ತರದ 100 ಪ್ರತಿಗಳನ್ನು ಇದರೊಂದಿಗೆ ಲಗತ್ತಿಸಿ ಕಳಹಿಸಲು ನಾನು ನಿರ್ದೇಶಿಸಲ್ಪಟ್ಟಿದ್ದೇನೆ. ಹಾಗೂ ಉತ್ತರದ SOFT COPY ಹಾಗೂ ಪ್ರಶ್ನೆಗಳ ಶಾಖೆಯ email ID :dsqb-kla-kar@nic.in ಗೆ ಕಳುಹಿಸಲಾಗಿದೆ.

ತಮ್ಮ ನಂಬುಗೆಯ,

(ಹೆಚ್.ವನಿತ)
ಸರ್ಕಾರದ ಅಧೀನ ಕಾರ್ಯದರ್ಶಿ
ತೋಟಗಾರಿಕೆ ಮತ್ತು ರೇಷ್ಮೆ ಇಲಾಖೆ (ರೇಷ್ಮೆ)

ಪ್ರತಿ ಮಾಹಿತಿಗಾಗಿ:

1. ಮಾನ್ಯ ಪೌರಾಡಳಿತ ತೋಟಗಾರಿಕೆ ಮತ್ತು ರೇಷ್ಮೆ ಸಚಿವರ ಆಪ್ತ ಕಾರ್ಯದರ್ಶಿ ರವರಿಗೆ, ವಿಧಾನಸೌಧ,ಬೆಂಗಳೂರು.
2. ಸರ್ಕಾರದ ಕಾರ್ಯದರ್ಶಿಗಳು, ತೋಟಗಾರಿಕೆ ಮತ್ತು ರೇಷ್ಮೆ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 2703
ಸದಸ್ಯರ ಹೆಸರು: ಶ್ರೀ ಕೌಜಲಗಿ ಮಹಾಂತೇಶ್ ಶಿವಾನಂದ್
ಉತ್ತರಿಸುವ ದಿನಾಂಕ: 20-03-2020
ಉತ್ತರಿಸುವವರು: ಪೌರಾಡಳಿತ, ತೋಟಗಾರಿಕೆ ಮತ್ತು ರೇಷ್ಮೆ ಸಚಿವರು

<table>
<tr><th></th><th>ಪ್ರಶ್ನೆಗಳು</th><th>ಉತ್ತರ</th></tr>
<tr><td>ಅ</td><td>ಬೆಳಗಾವಿ ಜಿಲ್ಲೆಯಲ್ಲಿ ಒಟ್ಟು ಎಷ್ಟು ಹೆಕ್ಟೇರ್ ಪ್ರದೇಶದಲ್ಲಿ ರೈತರು ರೇಷ್ಮೆಯನ್ನು ಬೆಳೆಯುತ್ತಿದ್ದಾರೆ; (ತಾಲ್ಲೂಕುವಾರು ವಿವರ ನೀಡುವುದು)</td><td>ಬೆಳಗಾವಿ ಜಿಲ್ಲೆಯಲ್ಲಿ 1143.96 ಹೆಕ್ಟೇರ್ ಪ್ರದೇಶದಲ್ಲಿ ರೈತರು ರೇಷ್ಮೆ ಬೆಳೆಯುತ್ತಿದ್ದಾರೆ. ತಾಲ್ಲೂಕುವಾರು ವಿವರ ಕೆಳಕಂಡಂತಿದೆ.
<table>
<tr><th>ಕ್ರ.ಸಂ.</th><th>ತಾಲ್ಲೂಕು</th><th>ವಿಸ್ತೀರ್ಣ (ಹೆಕ್ಟೇರ್)</th></tr>
<tr><td>1</td><td>ಬೆಳಗಾವಿ</td><td>45.70</td></tr>
<tr><td>2</td><td>ಬೈಲಹೊಂಗಲ</td><td>56.76</td></tr>
<tr><td>3</td><td>ಖಾನಾಪುರ</td><td>15.80</td></tr>
<tr><td>4</td><td>ಹುಕ್ಕೇರಿ</td><td>131.54</td></tr>
<tr><td>5</td><td>ಚಿಕ್ಕೋಡಿ</td><td>168.98</td></tr>
<tr><td>6</td><td>ಗೋಕಾಕ</td><td>215.89</td></tr>
<tr><td>7</td><td>ಅಥಣಿ</td><td>239.97</td></tr>
<tr><td>8</td><td>ರಾಯಭಾಗ</td><td>72.94</td></tr>
<tr><td>9</td><td>ರಾಮದುರ್ಗ</td><td>52.00</td></tr>
<tr><td>10</td><td>ಸವದತ್ತಿ</td><td>144.38</td></tr>
<tr><td colspan="2">ಒಟ್ಟು</td><td>1143.96</td></tr>
</table></td></tr>
<tr><td>ಆ</td><td>ಬೈಲಹೊಂಗಲ ಮತ್ತು ಸವದತ್ತಿ ತಾಲ್ಲೂಕಿನಲ್ಲಿ ವರ್ಷದಿಂದ ವರ್ಷಕ್ಕೆ ರೇಷ್ಮೆ ಬೆಳೆಗಾರರು ಕಡಿಮೆಯಾಗಲು ಕಾರಣಗಳೇನು;</td><td>ಬೈಲಹೊಂಗಲ ಹಾಗೂ ಸವದತ್ತಿ ತಾಲ್ಲೂಕುಗಳಲ್ಲಿ ವರ್ಷದಿಂದ ವರ್ಷಕ್ಕೆ ರೇಷ್ಮೆ ಬೆಳೆಗಾರರು ಕಡಿಮೆಯಾಗುತ್ತಿಲ್ಲ ಬದಲಾಗಿ ವರ್ಷದಿಂದ ವರ್ಷಕ್ಕೆ ಹೆಚ್ಚಾಗುತ್ತಿದ್ದಾರೆ. ವಿವರ ಈ ಕೆಳಕಂಡಂತಿದೆ.
<table>
<tr><th rowspan="2">ಕ್ರ. ಸಂ.</th><th rowspan="2">ತಾಲ್ಲೂಕು</th><th colspan="3">ರೇಷ್ಮೆ ಬೆಳೆಗಾರರ ಸಂಖ್ಯೆ</th></tr>
<tr><th>2017-18</th><th>2018-19</th><th>2019-20</th></tr>
<tr><td>1</td><td>ಬೈಲಹೊಂಗಲ</td><td>69</td><td>81</td><td>93</td></tr>
<tr><td>2</td><td>ಸವದತ್ತಿ</td><td>124</td><td>163</td><td>184</td></tr>
</table></td></tr>
<tr><td>ಇ</td><td>ರೈತರಿಗೆ ರೇಷ್ಮೆ ಬೆಳೆಯನ್ನು ಬೆಳೆಯಲು ಸರ್ಕಾರದಿಂದ ರೂಪಿಸಲಾಗಿರುವ ಯೋಜನೆಗಳಾವುವು ಹಾಗೂ ಈ ಬಗ್ಗೆ ಅವರಿಗೆ ಪ್ರೋತ್ಸಾಹವನ್ನು ನೀಡಲಾಗುತ್ತಿದೆ? (ವಿವರ ನೀಡುವುದು)</td><td>ರೈತರಿಗೆ ರೇಷ್ಮೆ ಕೃಷಿ ಅಭಿವೃದ್ಧಿಗಾಗಿ ಸರ್ಕಾರವು ಈ ಕೆಳಕಂಡ ಕಾರ್ಯಕ್ರಮಗಳನ್ನು ರೂಪಿಸಿ ಸಹಾಯಧನ ಹಾಗೂ ಪ್ರೋತ್ಸಾಹಧನ ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ.
1. ಸುಧಾರಿತ ಹಿಪ್ಪುನೇರಳೆ ತೋಟ ಬೆಳೆಯಲು, ನರ್ಸರಿ ಬೆಳೆಸಲು ಸಹಾಯಧನ ಹಾಗೂ ತಾಂತ್ರಿಕ ಮಾಹಿತಿ ಒದಗಿಸಲಾಗುತ್ತಿದೆ.
2. ಹಿಪ್ಪುನೇರಳೆ ತೋಟಕ್ಕೆ ಟ್ರಂಚಿಂಗ್ - ಮಲ್ಚಿಂಗ್ ಮಾಡಲು ಸಹಾಯಧನ ಹಾಗೂ ತಾಂತ್ರಿಕ ಮಾಹಿತಿ.
3. ಹಿಪ್ಪುನೇರಳೆ ತೋಟಕ್ಕೆ ಹನಿ ನೀರಾವರಿ ಅಳವಡಿಕೆಗೆ ಶೇ.90ರಷ್ಟು ಸಹಾಯಧನ.
4. ಹಿಪ್ಪುನೇರಳೆ ತೋಟದ ಮಣ್ಣಿನ ಫಲವತ್ತತೆಗಾಗಿ ಜೈವಿಕಗೊಬ್ಬರ ಬಳಕೆ, ಹಿಪ್ಪುನೇರಳೆ ಸೊಪ್ಪಿನ ಇಳುವರಿ ಹಾಗೂ ಗುಣಮಟ್ಟ ಹೆಚ್ಚಿಸುವ ಸಲುವಾಗಿ ಸಸ್ಯ ಸಂವರ್ಧಕ ಹಾಗೂ ಬೇರು ಕೊಳೆ ನಿಯಂತ್ರಣಕ್ಕಾಗಿ ಸಹಾಯಧನ.
5. ಹಿಪ್ಪುನೇರಳೆ ಮರ ಕೃಷಿ ಪದ್ಧತಿ ಉತ್ತೇಜನಕ್ಕಾಗಿ ಸಹಾಯಧನ.</td></tr>
</table>

		6. ರೇಷ್ಮೆ ಹುಳು ಸಾಕಾಣಿಕೆ ಮನೆ/ಮೌಂಟಿಂಗ್ ಹಾಲ್ ನಿರ್ಮಾಣಕ್ಕೆ ಸಹಾಯಧನ. 7. ಸೋಂಕು ನಿವಾರಕಗಳ ಪೂರೈಕೆ ಮತ್ತು ಸಲಕರಣೆಗಳಿಗೆ ಸಹಾಯಧನ ಹಾಗೂ ತಾಂತ್ರಿಕ ಮಾಹಿತಿ. 8. ರೋಟರಿ ಚಂದ್ರಿಕೆಗಳ ಖರೀದಿಗೆ ಸಹಾಯಧನ 9. ದ್ವಿತಳಿ ಚಾಕಿ ವೆಚ್ಚಕ್ಕೆ ಸಹಾಯಧನ. 10. ಚಾಕಿ ಸಾಕಾಣಿಕಾ ಕೇಂದ್ರದ ಸ್ಥಾಪನೆಗೆ / ಸಲಕರಣೆಗಳಿಗೆ ಸಹಾಯಧನ. 11. ನೂತನ ತಾಂತ್ರಿಕತೆಗಳ ಅಳವಡಿಕೆಗೆ ರೈತರಿಗೆ ತರಬೇತಿ ಮತ್ತು ಕಾರ್ಯಾಗಾರ. 12. ರೇಷ್ಮೆ ಗೂಡಿನ ಧಾರಣೆ ಕುಸಿತ ಸಂದರ್ಭದಲ್ಲಿ ರೇಷ್ಮೆ ಬೆಳೆಗಾರರಿಗೆ ರಕ್ಷಣಾತ್ಮಕ ದರ ನೀಡಲಾಗುತ್ತಿದೆ. 13. ದ್ವಿತಳಿ ಬಿತ್ತನೆ ಬೆಳೆಗಾರರು ಹಾಗೂ ಮೈಸೂರು ಬಿತ್ತನೆ ಬೆಳೆಗಾರರು ಬೆಳೆಯುವ ಬಿತ್ತನೆ ಗೂಡಿಗೆ ಪ್ರೋತ್ಸಾಹಧನ / ಬೋನಸ್ ನೀಡಲಾಗುತ್ತಿದೆ. 14. ರೇಷ್ಮೆ ಬಿತ್ತನೆ ಬೆಳೆಗಾರರಿಗೆ ಉತ್ಪಾದಕತೆ ಮತ್ತು ಗುಣಮಟ್ಟ ಆಧರಿಸಿ ಬಿತ್ತನೆ ಗೂಡಿಗೆ ಪ್ರೋತ್ಸಾಹಧನ ನೀಡಲಾಗುತ್ತಿದೆ. 15. ಉತ್ತರ ಕರ್ನಾಟಕ ಜಿಲ್ಲೆಗಳಲ್ಲಿ ಉತ್ಪಾದಿಸುವ ದ್ವಿತಳಿ ರೇಷ್ಮೆ ಗೂಡಿಗೆ ಕೆ.ಜಿ.ಗೆ ರೂ.10/-ರಂತೆ ಸಾಗಾಣಿಕೆ ವೆಚ್ಚ. ಮುಂದುವರೆದು, ರೇಷ್ಮೆ ಇಲಾಖೆಯ ಕ್ಷೇತ್ರಮಟ್ಟದ ಎಲ್ಲಾ ಕಚೇರಿಗಳಲ್ಲಿ ರೇಷ್ಮೆ ಬೆಳೆಗಾರರಿಗೆ ಇಲಾಖೆಯಿಂದ ದೊರೆಯುವ ಸಹಾಯಧನ/ಪ್ರೋತ್ಸಾಹಧನ ವಿವರಗಳನ್ನು ಹಾಗೂ ತಾಂತ್ರಿಕ ಮಾಹಿತಿಗಳನ್ನು ಫಲಕಗಳಲ್ಲಿ ಪ್ರದರ್ಶಿಸಲಾಗಿದೆ. ಹೊಸ ತಾಂತ್ರಿಕತೆ ಮತ್ತು ನೂತನ ಅವಿಷ್ಕಾರಗಳ ಬಗ್ಗೆ ಕರಪತ್ರ, ಬ್ರೋಚರ್ ಮತ್ತು ಭಿತ್ತಿ ಪತ್ರಗಳ ಮೂಲಕ ರೇಷ್ಮೆ ಬೆಳೆಗಾರರಿಗೆ ಮಾಹಿತಿ ನೀಡಲಾಗುತ್ತಿದೆ. ಅಲ್ಲದೇ, ರೇಷ್ಮೆ ಬೆಳೆಗಾರರಿಗೆ ಕ್ಷೇತ್ರಮಟ್ಟದಲ್ಲಿ ನೂತನ ತಾಂತ್ರಿಕತೆಗಳ ಬಗ್ಗೆ ಕಾರ್ಯಾಗಾರ, ಕ್ಷೇತ್ರೋತ್ಸವಗಳು, ವಸ್ತುಪ್ರದರ್ಶನ, ಗ್ರಾಮಮಟ್ಟದಲ್ಲಿ ರೈತರಿಂದ ರೈತರಿಗೆ ತರಬೇತಿ, ರೇಷ್ಮೆ ತರಬೇತಿ ಸಂಸ್ಥೆಗಳಿಂದ ಕ್ಷೇತ್ರಮಟ್ಟದಲ್ಲಿ ರೈತರಿಗೆ ಒಂದು ದಿನ ತರಬೇತಿ ಕಾರ್ಯಕ್ರಮಗಳನ್ನು ಆಯೋಜಿಸಿ ರೇಷ್ಮೆ ಬೆಳೆಗಾರರಲ್ಲಿ ಅರಿವು ಮೂಡಿಸಲಾಗುತ್ತಿದೆ. ದೂರದರ್ಶನ ಹಾಗೂ ರೇಡಿಯೋ ಮೂಲಕ ವಿಜ್ಞಾನಿಗಳು, ತಾಂತ್ರಿಕ ಅಧಿಕಾರಿಗಳು ಚರ್ಚೆಗಳಲ್ಲಿ ಭಾಗವಹಿಸಿ, ಅಗತ್ಯ ತಾಂತ್ರಿಕ ಮಾಹಿತಿಯನ್ನು ಒದಗಿಸಲಾಗುತ್ತಿದೆ.

ರೇಷ್ಮೆ 47 ರೇಕೃವಿ 2020

(ನಾರಾಯಣ ಗೌಡ)
ಪೌರಾಡಳಿತ, ತೋಟಗಾರಿಕೆ
ಮತ್ತು ರೇಷ್ಮೆ ಸಚಿವರು

ಕರ್ನಾಟಕ ಸರ್ಕಾರ

ಸಂಖ್ಯೆ:ನಅಇ 65 ಯುಎಂಎಸ್ 2020

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಕಾಸ ಸೌಧ,
ಬೆಂಗಳೂರು, ದಿನಾಂಕ:19.03.2020

ಇವರಿಂದ:
ಸರ್ಕಾರದ ಪ್ರಧಾನ ಕಾರ್ಯದರ್ಶಿ,
ನಗರಾಭಿವೃದ್ಧಿ ಇಲಾಖೆ,
ವಿಕಾಸ ಸೌಧ,
ಬೆಂಗಳೂರು.

ಇವರಿಗೆ:
ಕಾರ್ಯದರ್ಶಿ,
ಕರ್ನಾಟಕ ವಿಧಾನ ಸಭೆ,
ವಿಧಾನ ಸೌಧ,
ಬೆಂಗಳೂರು.

ಮಾನ್ಯರೇ,

ವಿಷಯ: ಮಾನ್ಯ ವಿಧಾನ ಸಭಾ ಸದಸ್ಯರಾದ ಶ್ರೀ ಕೌಜಲಗಿ ಮಹಾಂತೇಶ್ ಶಿವಾನಂದ ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 2704 ಕ್ಕೆ ಉತ್ತರಿಸುವ ಬಗ್ಗೆ

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಕರ್ನಾಟಕ ವಿಧಾನ ಸಭಾ ಸದಸ್ಯರಾದ ಶ್ರೀ ಕೌಜಲಗಿ ಶಿವಾನಂದ್ ಮಹಾಂತೇಶ್ ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 2704 ಕ್ಕೆ ಉತ್ತರದ 100 ಪ್ರತಿಗಳನ್ನು ಇದರೊಂದಿಗೆ ಲಗತ್ತಿಸಿ, ಮುಂದಿನ ಸೂಕ್ತ ಕ್ರಮಕ್ಕಾಗಿ ಕಳುಹಿಸಿಕೊಡಲು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ನಂಬುಗೆಯ,

(ಎಸ್.ದಿವಾಕರ್)
ಶಾಖಾಧಿಕಾರಿ,
ಮಂಡಳಿ ಶಾಖೆ
ನಗರಾಭಿವೃದ್ಧಿ ಇಲಾಖೆ.

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	2704
ಸದಸ್ಯರ ಹೆಸರು	:	ಶ್ರೀ ಕೌಜಲಗಿ ಮಹಾಂತೇಶ್ ಶಿವಾನಂದ್ (ಬೈಲಹೊಂಗಲ)
ಉತ್ತರಿಸಬೇಕಾದ ದಿನಾಂಕ	:	20.03.2020
ಉತ್ತರಿಸಬೇಕಾದ ಸಚಿವರು	:	ನಗರಾಭಿವೃದ್ಧಿ ಸಚಿವರು.

****

ಕ್ರ. ಸಂ	ಪ್ರಶ್ನೆ	ಉತ್ತರ
ಅ)	ಬೆಳಗಾವಿ ಜಿಲ್ಲೆ ಬೈಲಹೊಂಗಲ ನಗರದಲ್ಲಿ ಒಳಚರಂಡಿ ಯೋಜನೆಗಾಗಿ ಬಿಡುಗಡೆಯಾದ ಅನುದಾನವೆಷ್ಟು;	ಬೆಳಗಾವಿ ಜಿಲ್ಲೆಯ ಬೈಲಹೊಂಗಲ ಪಟ್ಟಣಕ್ಕೆ ಒಳಚರಂಡಿ ವ್ಯವಸ್ಥೆ ಕಲ್ಪಿಸುವ ರೂ.5700.00 ಲಕ್ಷಗಳ ಯೋಜನೆಗೆ ಸರ್ಕಾರದ ಆದೇಶ ದಿನಾಂಕ: 08-02-2010 ರಲ್ಲಿ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ. ಸದರಿ ಯೋಜನೆಯು ಯಶಸ್ವಿಯಾಗಿ ಕಾರ್ಯನಿರ್ವಹಿಸಲು ಪ್ರತ್ಯೇಕ ಗೃಹಗಳಿಗೆ ಸಂಪರ್ಕಗಳನ್ನು ಒದಗಿಸುವ ರೂ.650.00 ಲಕ್ಷಗಳ ಯೋಜನೆಗೆ ಸರ್ಕಾರದ ಆದೇಶ ದಿನಾಂಕ: 02.01.2019 ರಲ್ಲಿ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ.
ಆ)	ಸದರಿ ಕಾಮಗಾರಿ ಮುಕ್ತಾಯಗೊಂಡಿದ್ದರೂ ಇನ್ನೂ ಅನೇಕ ಪ್ರದೇಶಗಳಲ್ಲಿ ಒಳಚರಂಡಿ ಕಾಮಗಾರಿ ಕೈಗೊಳ್ಳುವ ಅವಶ್ಯಕತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಹೌದು.
ಇ)	ಈಗಾಗಲೇ ಉಳಿದ ಪ್ರದೇಶದಲ್ಲಿಯೂ ಒಳಚರಂಡಿ ಅಭಿವೃದ್ಧಿಗಾಗಿ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿದ್ದು ನಿಜವಲ್ಲವೇ;	ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯಿಂದ ಉಳಿದ ಪ್ರದೇಶಗಳಿಗೆ ಒಳಚರಂಡಿ ವ್ಯವಸ್ಥೆ ಕಲ್ಪಿಸುವ ರೂ.687.00 ಲಕ್ಷಗಳ ಅಂದಾಜು ಪಟ್ಟಿಯು ಆಡಳಿತಾತ್ಮಕ ಅನುಮೋದನೆಗಾಗಿ ಸ್ವೀಕೃತವಾಗಿದ್ದು, ಸದರಿ ಪ್ರಸ್ತಾವನೆಯು ಸರ್ಕಾರದ ಪರಿಶೀಲನೆಯಲ್ಲಿದೆ.
ಈ)	ಹಾಗಿದ್ದಲ್ಲಿ, ಅದಕ್ಕೆ ಬೇಕಾಗುವ ಹಣವನ್ನು ಬಿಡುಗಡೆ ಮಾಡಲು ಕ್ರಮ ಕೈಗೊಳ್ಳಲಾಗುವುದೇ?	

ಸಂಖ್ಯೆ: ನಅಇ 72 ಯುಎಂಎಸ್ 2020

(ಬಿ.ಎ. ಬಸವರಾಜ)
ನಗರಾಭಿವೃದ್ಧಿ ಸಚಿವರು

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	2471
ಸದಸ್ಯರ ಹೆಸರು	:	ಶ್ರೀ ಖಾದರ್ ಯು.ಟಿ (ಮಂಗಳೂರು)
ಉತ್ತರಿಸುವ ದಿನಾಂಕ	:	20-03-2020
ಉತ್ತರಿಸಬೇಕಾದವರು	:	ನಗರಾಭಿವೃದ್ಧಿ ಸಚಿವರು

ಕ್ರ. ಸಂ	ಪ್ರಶ್ನೆ	ಉತ್ತರ
ಅ)	ಭೂಮಿ ಮತ್ತು ಕಟ್ಟಡ ಯೋಜನೆ ಅನುಮೋದನೆಗಾಗಿ ಏಕಗವಾಕ್ಷಿ ಯೋಜನೆಯ (Land and Building Plan Approval System) ಪ್ರಗತಿ ಯಾವ ಹಂತದಲ್ಲಿದೆ;	LBPAS ತಂತ್ರಾಂಶದಡಿಯಲ್ಲಿ ಕಟ್ಟಡ ಪರವಾನಿಗೆಗೆ ಸಂಬಂಧಿಸಿದಂತೆ ರಾಜ್ಯದ ಎಲ್ಲಾ 276 ನಗರ ಸ್ಥಳೀಯ ಸಂಸ್ಥೆಗಳಲ್ಲಿ ತಂತ್ರಾಂಶವನ್ನು ಬಳಸಿ ಕಟ್ಟಡ ಪರವಾನಿಗೆಯನ್ನು ನೀಡಲು ಅನುಷ್ಠಾನಗೊಳಿಸಲಾಗಿರುತ್ತದೆ. ಭೂ ಉಪಯೋಗ ಬದಲಾವಣೆ ಸಂಬಂಧ ತಂತ್ರಾಂಶ ತಯಾರಿಸಲಾಗಿದ್ದು, ಪ್ರಾಯೋಗಿಕವಾಗಿ ಹುಬ್ಬಳ್ಳಿ-ಧಾರವಾಡ, ಶಿವಮೊಗ್ಗ-ಭದ್ರಾವತಿ, ರಾಮನಗರ ನಗರಾಭಿವೃದ್ಧಿ ಪ್ರಾಧಿಕಾರಗಳು, ಆನೇಕಲ್, ಹೊಸಕೋಟೆ, ಕನಕಪುರ, ಮಾಗಡಿ, ನೆಲಮಂಗಲ, ಚನ್ನಪಟ್ಟಣ, ಬೆಂಗಳೂರು ಇಂಟರ್‌ನ್ಯಾಶನಲ್ ಏರ್‌ಪೋರ್ಟ್ ಏರಿಯಾ (BIAAPA), ಗ್ರೇಟರ್ ಬೆಂಗಳೂರು-ಬಿಡದಿ ಸ್ಮಾರ್ಟ್‌ಸಿಟಿ (GBBSC), ಸ್ಯಾಟ್‌ಲೈಟ್ ಟೌನ್ ರಿಂಗ್ ರೋಡ್ (STRR) ಯೋಜನಾ ಪ್ರಾಧಿಕಾರಗಳು ಹಾಗೂ ಹಿರಿಯೂರು ಪುರಸಭೆ ಯೋಜನಾ ಪ್ರಾಧಿಕಾರಗಳಲ್ಲಿ ಅಳವಡಿಸಿ ಕ್ರಮ ಜರುಗಿಸಲಾಗುತ್ತಿದೆ.
ಆ)	ಅರ್ಜಿಗಳನ್ನು ತ್ವರಿತಗತಿಯಲ್ಲಿ ವಿಲೇವಾರಿ ಮಾಡಲು ಕ್ರಮ ಕೈಗೊಳ್ಳಲಾಗುತ್ತಿದೆಯೇ? (ವಿವರ ನೀಡುವುದು)	Land and Building Plan Approval System (LBPAS) ತಂತ್ರಾಂಶದಲ್ಲಿ ಅರ್ಜಿಗಳನ್ನು ನಿಗಧಿತ ಕಾಲಾವಧಿಯಲ್ಲಿ ವಿಲೇವಾರಿ ಮಾಡಲು ಅವಕಾಶ ಕಲ್ಪಿಸಲಾಗಿದೆ.

ಸಂಖ್ಯೆ: ನಅಇ 69 ಬೆಂರೂಪ್ರಾ 2020(ಇ-ಆಫೀಸ್)

(ಬಿ.ಎ.ಬಸವರಾಜ)
ನಗರಾಭಿವೃದ್ಧಿ ಸಚಿವರು

ಕರ್ನಾಟಕ ಸರ್ಕಾರ

ಸಿಒ 21 ಸಿಹೆಚ್ಎಸ್ 2020(ಇ)

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:18.03.2020.

45 4/8
20/3/2020

ಇಂದ:
ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ,
ಸಹಕಾರ ಇಲಾಖೆ,
ಬೆಂಗಳೂರು-01.

ಇವರಿಗೆ:
ಕಾರ್ಯದರ್ಶಿ,
ಕರ್ನಾಟಕ ವಿಧಾನ ಸಭೆ ಸಚಿವಾಲಯ,
ವಿಧಾನ ಸೌಧ,
ಬೆಂಗಳೂರು.

ಮಾನ್ಯರೆ,

ವಿಷಯ: ಶ್ರೀ ಕುಮಾರಸ್ವಾಮಿ ಹೆಚ್.ಕೆ (ಸಕಲೇಶಪುರ) ಮಾನ್ಯ ವಿಧಾನ ಸಭಾ ಸದಸ್ಯರು ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:2661ಕ್ಕೆ ಉತ್ತರಿಸುವ ಬಗ್ಗೆ.

ಉಲ್ಲೇಖ: ತಮ್ಮ ಪತ್ರ ಸಂಖ್ಯೆ:ಪ್ರಶಾವಿಸ/15ನೇವಿಸ/6ಅ/ಪ್ರ.ಸಂ.2661/2020, ದಿ:09-03-2020.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಶ್ರೀ ಕುಮಾರಸ್ವಾಮಿ ಹೆಚ್.ಕೆ (ಸಕಲೇಶಪುರ) ಮಾನ್ಯ ವಿಧಾನ ಸಭಾ ಸದಸ್ಯರು ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:2661ಕ್ಕೆ ಮಾನ್ಯ ಸಹಕಾರ ಸಚಿವರು ದಿ:20-03-2020ರಂದು ಉತ್ತರಿಸಬೇಕಾಗಿರುವುದರಿಂದ ಸದರಿ ಪ್ರಶ್ನೆಗೆ ಸಂಬಂಧಿಸಿದಂತೆ ಉತ್ತರವನ್ನು ಸಿದ್ದಪಡಿಸಿ 120 ಉತ್ತರದ ಪ್ರತಿಗಳನ್ನು ಈ ಪತ್ರದೊಂದಿಗೆ ಲಗತ್ತಿಸಿ ಮುಂದಿನ ಕ್ರಮಕ್ಕಾಗಿ ಕಳುಹಿಸಿದೆ.

ತಮ್ಮ ನಂಬುಗೆಯ,
18/3/2020
(ಮನೋರಮ ಡಿ.ಸಿ)
ಸರ್ಕಾರದ ಅಧೀನ ಕಾರ್ಯದರ್ಶಿ-3,
ಸಹಕಾರ ಇಲಾಖೆ.

ಕರ್ನಾಟಕ ವಿಧಾನ ಸಭೆ

ಮಾನ್ಯ ವಿಧಾನ ಸಭೆ ಸದಸ್ಯರ ಹೆಸರು	:	ಶ್ರೀ ಕುಮಾರಸ್ವಾಮಿ ಹೆಚ್.ಕೆ (ಸಕಲೇಶಪುರ)
ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	**2661**
ಉತ್ತರಿಸಬೇಕಾದ ದಿನಾಂಕ	:	**20.03.2020.**
ಉತ್ತರಿಸಬೇಕಾದ ಸಚಿವರು	:	ಸಹಕಾರ ಸಚಿವರು.

ಕ್ರಸಂ	ಪ್ರಶ್ನೆ	ಉತ್ತರ
ಅ)	ಹಾಸನ ಜಿಲ್ಲೆಯಲ್ಲಿ ನೋಂದಣಿಯಾಗಿರುವ ಗೃಹ ನಿರ್ಮಾಣ ಸಹಕಾರ ಸಂಘಗಳ ಸಂಖ್ಯೆ ಎಷ್ಟು ಹಾಗೂ ಕಾರ್ಯನಿರ್ವಹಿಸುತ್ತಿರುವ ಗೃಹ ನಿರ್ಮಾಣ ಸಹಕಾರ ಸಂಘಗಳ ಸಂಖ್ಯೆ ಎಷ್ಟು; (ಸಂಘಗಳ ಹೆಸರುವಾರು, ತಾಲ್ಲೂಕುವಾರು ಸಂಪೂರ್ಣ ಮಾಹಿತಿ ನೀಡುವುದು)	ಹಾಸನ ಜಿಲ್ಲೆ ವ್ಯಾಪ್ತಿಯ 08 ತಾಲ್ಲೂಕುಗಳಲ್ಲಿ ದಿನಾಂಕ: 31.01.2020 ರ ಅಂತ್ಯಕ್ಕೆ ಇದ್ದಂತೆ ಕಾರ್ಯನಿರ್ವಹಿಸುತ್ತಿರುವ, ಸಮಾಪನೆಗೊಂಡಿರುವ ಹಾಗೂ ಸ್ಥಗಿತಗೊಂಡಿರುವ ಗೃಹ ನಿರ್ಮಾಣ ಸಹಕಾರ ಸಂಘಗಳ ತಾಲ್ಲೂಕುವಾರು ಮಾಹಿತಿಯು ಈ ಕೆಳಕಂಡಂತಿದೆ. (ಕೋಷ್ಟಕ ಕೆಳಗೆ) ಸಂಘಗಳ ವಿವರವನ್ನು ಅನುಬಂಧದಲ್ಲಿ ಲಗತ್ತಿಸಿದೆ.

ಕ್ರಸಂ	ತಾಲ್ಲೂಕು	ಕಾರ್ಯ ನಿರ್ವಹಿಸುತ್ತಿರುವ ಸಂಘಗಳ ಸಂಖ್ಯೆ	ಸಮಾಪನೆ ಯಲ್ಲಿರುವ ಸಂಘಗಳ ಸಂಖ್ಯೆ	ಸ್ಥಗಿತ ಗೊಂಡಿರುವ ಸಂಘಗಳ ಸಂಖ್ಯೆ
1	ಅರಸೀಕೆರೆ	02	01	0
2	ಹಾಸನ	21	01	04
3	ಹೊ.ನ.ಪುರ	0	01	0
4	ಬೇಲೂರು	0	01	0
5	ಸಕಲೇಶಪುರ	0	01	0
6	ಅರಕಲಗೂಡು	01	01	0
7	ಚ.ರಾ.ಪಟ್ಟಣ	0	0	01
8	ಆಲೂರು	0	0	01
	ಒಟ್ಟು	**24**	**06**	**06**

ಸಂಘಗಳ ವಿವರವನ್ನು ಅನುಬಂಧದಲ್ಲಿ ಲಗತ್ತಿಸಿದೆ.

ಕ್ರಸಂ	ಪ್ರಶ್ನೆ	ಉತ್ತರ
ಆ)	ಸದರಿ ಸಂಘಗಳಲ್ಲಿ ಎಷ್ಟು ಸಂಘಗಳು ಸ್ಥಗಿತಗೊಂಡಿವೆ; ಸ್ಥಗಿತಗೊಳ್ಳಲು ಕಾರಣಗಳೇನು; (ಸಂಪೂರ್ಣ ಮಾಹಿತಿ ನೀಡುವುದು)	ಹಾಸನ ಜಿಲ್ಲೆ ವ್ಯಾಪ್ತಿಯಲ್ಲಿ 06 ಗೃಹ ನಿರ್ಮಾಣ ಸಹಕಾರ ಸಂಘಗಳು ಸ್ಥಗಿತಗೊಂಡಿರುತ್ತವೆ. ಸದರಿ ಸಂಘಗಳು ನೋಂದಾಯಿತ ಉದ್ದೇಶಕ್ಕನುಗುಣವಾಗಿ ಉಪನಿಯಮಗಳನ್ವಯ ಕಾರ್ಯಚಟುವಟಿಕೆ ನಡೆಸದೆ ಇರುವ ಕಾರಣ ಸ್ಥಗಿತಗೊಂಡಿರುತ್ತವೆ.
ಇ)	ಈ ಸಂಘಗಳು ಕಾರ್ಯವ್ಯಾಪ್ತಿ ಮೀರಿ ಸರ್ಕಾರದ ನಿಯಮಗಳನ್ನು ಉಲ್ಲಂಘಿಸಿ ಕಾನೂನುಬಾಹಿರವಾಗಿ ಬಡಾವಣೆಗಳನ್ನು ನಿರ್ಮಿಸಿ, ನಿವೇಶನಗಳನ್ನು ಹಂಚಿಕೆ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಅಂತಹ ಸಂಘಗಳ ವಿರುದ್ಧ ಸರ್ಕಾರ ಕೈಗೊಂಡಿರುವ ಕ್ರಮಗಳೇನು; (ತಾಲ್ಲೂಕುವಾರು ಸಂಪೂರ್ಣ ಮಾಹಿತಿ ನೀಡುವುದು)	ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ.

ಈ)	ಸದರಿ ಸಂಘದಲ್ಲಿ ಸದಸ್ಯರಲ್ಲದವರಿಗೆ ನಿವೇಶಗಳನ್ನು ಹಂಚಿಕೆ ಮಾಡಲು ನಿಯಮಾವಳಿಗಳಲ್ಲಿ ಅವಕಾಶವಿದೆಯೇ; ಈ ರೀತಿ ತಮ್ಮ ಸಂಘದ ಸದಸ್ಯರಲ್ಲದವರಿಗೆ ನಿವೇಶನಗಳನ್ನು ಹಂಚಿಕೆ ಮಾಡಿದ್ದಲ್ಲಿ, ಅಂತಹ ಸಂಘಗಳಿಗೆ ನೀಡಿರುವ ಅನುಮತಿಯನ್ನು ರದ್ದುಪಡಿಸಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು; (ತಾಲ್ಲೂಕುವಾರು ಸಂಪೂರ್ಣ ಮಾಹಿತಿ ನೀಡುವುದು)	ಗೃಹ ನಿರ್ಮಾಣ ಸಹಕಾರ ಸಂಘಗಳು ತಮ್ಮ ಸಂಘದ ಸದಸ್ಯರಲ್ಲದವರಿಗೆ ನಿವೇಶನಗಳನ್ನು ಹಂಚಿಕೆ ಮಾಡಲು ನಿಯಮಾವಳಿಗಳಲ್ಲಿ ಅವಕಾಶವಿರುವುದಿಲ್ಲ. ಸಂಘದ ಸದಸ್ಯರಲ್ಲದವರಿಗೆ ನಿವೇಶನಗಳನ್ನು ಹಂಚಿಕೆ ಮಾಡಿರುವ ಪ್ರಕರಣಗಳು ಕಂಡುಬಂದಿರುವುದಿಲ್ಲ.

ಸಿಒ 21 ಸಿಹೆಚ್‌ಎಸ್ 2020

(ಎಸ್.ಟಿ ಸೋಮಶೇಖರ್)
ಸಹಕಾರ ಸಚಿವರು

ಮಾನ್ಯ ವಿಧಾನ ಸಭೆಯ ಸದಸ್ಯರಾದ ಶ್ರೀ ಕುಮಾರಸ್ವಾಮಿ.ಹೆಚ್.ಕೆ (ಸಕಲೇಶಪುರ) ಅವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 2661 ಕ್ಕೆ ಅನುಬಂಧ

ಜಿಲ್ಲೆಯ ಹೆಸರು: ಹಾಸನ

ಕ್ರ.ಸಂ	ಸಂಘದ ಹೆಸರು	ತಾಲ್ಲೂಕು	ಕಾರ್ಯವೈಖರಿ
	ಕಾರ್ಯನಿರತ ಸಹಕಾರ ಸಂಘಗಳು		
1	ನವ ಕರ್ನಾಟಕ ಗೃಹ ನಿರ್ಮಾಣ ಸಹಕಾರ ಸಂಘ ನಿ., ಅರಸೀಕೆರೆ	ಅರಸೀಕೆರೆ	ಕಾರ್ಯನಿರತ
2	ಅರಸೀಕೆರೆ ತಾ: ರಾಜ್ಯ ಸರ್ಕಾರಿ ನೌಕರರ ಗೃಹ ನಿರ್ಮಾಣ ಸಹಕಾರ ಸಂಘ ನಿ., ಅರಸೀಕೆರೆ	ಅರಸೀಕೆರೆ	ಕಾರ್ಯನಿರತ
3	ಹಾಸನ ನಗರ ಗೃಹ ನಿರ್ಮಾಣ ಸಹಕಾರ ಸಂಘ ನಿ., ಹಾಸನ	ಹಾಸನ	ಕಾರ್ಯನಿರತ
4	ವಿದ್ಯಾನಗರ (ಸತ್ಯಮಂಗಲ) ಗೃಹ ನಿರ್ಮಾಣ ಸಹಕಾರ ಸಂಘ ನಿ., ಹಾಸನ	ಹಾಸನ	ಕಾರ್ಯನಿರತ
5	ಹೇಮಾವತಿ ಗೃಹ ನಿರ್ಮಾಣ ಸಹಕಾರ ಸಂಘ ನಿ., ಹಾಸನ	ಹಾಸನ	ಕಾರ್ಯನಿರತ
6	ಕೋ_ಆಫ್ ಡಿಪಾರ್ಟ್‌ಮೆಂಟಲ್ ಗೃಹ ನಿರ್ಮಾಣ ಸಹಕಾರ ಸಂಘ ನಿ., ಹಾಸನ	ಹಾಸನ	ಕಾರ್ಯನಿರತ
7	ಕೆ ಎಸ್ ಆರ್ ಟಿ ಸಿ ಗೃಹ ನಿರ್ಮಾಣ ಸಹಕಾರ ಸಂಘ ನಿ., ಹಾಸನ	ಹಾಸನ	ಕಾರ್ಯನಿರತ
8	ಕಿಂಕೊ ಗೃಹ ನಿರ್ಮಾಣ ಸಹಕಾರ ಸಂಘ ನಿ., ಹಾಸನ	ಹಾಸನ	ಕಾರ್ಯನಿರತ
9	ಶಿಕ್ಷಕರ ಗೃಹ ನಿರ್ಮಾಣ ಸಹಕಾರ ಸಂಘ ನಿ., ಹಾಸನ	ಹಾಸನ	ಕಾರ್ಯನಿರತ
10	ಕೆ.ಜಿ.ಐ.ಡಿ. ಎಂಪ್ಲಾಯೀಸ್ ಗೃಹ ನಿರ್ಮಾಣ ಸಹಕಾರ ಸಂಘ ನಿ., ಹಾಸನ	ಹಾಸನ	ಕಾರ್ಯನಿರತ
11	ಎಸ್.ಬಿ.ಎಂ ನೌಕರರ ಗೃಹ ನಿರ್ಮಾಣ ಸಹಕಾರ ಸಂಘ ನಿ., ಹಾಸನ	ಹಾಸನ	ಕಾರ್ಯನಿರತ
12	ದಿ ಟೆಲಿಕಾಂ ನೌಕರರ ಗೃಹ ನಿರ್ಮಾಣ ಸಹಕಾರ ಸಂಘ ನಿ., ಹಾಸನ	ಹಾಸನ	ಕಾರ್ಯನಿರತ
13	ಹಾಸನ ಜಿಲ್ಲಾ ರಾಜ್ಯ ಸರ್ಕಾರಿ ನೌಕರರ ಗೃಹ ನಿರ್ಮಾಣ ಸಹಕಾರ ಸಂಘ ನಿ., ಹಾಸನ	ಹಾಸನ	ಕಾರ್ಯನಿರತ
14	ಉಪಗ್ರಹ ಗೃಹ ನಿರ್ಮಾಣ ಸ.ಸಂ.ನಿ., ಎಂಸಿಎಫ್, ಹಾಸನ	ಹಾಸನ	ಕಾರ್ಯನಿರತ
15	ಹಾಸನ ತಾಲ್ಲೂಕು ಸರ್ಕಾರಿ ನೌಕರರ ಗೃಹ ನಿರ್ಮಾಣ ಸಹಕಾರ ಸಂಘ ನಿ., ಹಾಸನ.	ಹಾಸನ	ಕಾರ್ಯನಿರತ
16	ಶ್ರೀ ಪುಷ್ಪಗಿರಿ ಗೃಹ ನಿರ್ಮಾಣ ಸಹಕಾರ ಸಂಘ ನಿ., ಹಾಸನ.	ಹಾಸನ	ಕಾರ್ಯನಿರತ
17	ಕಂಬದ ನರಸಿಂಹಸ್ವಾಮಿ ಗೃಹ ನಿರ್ಮಾಣ ಸಹಕಾರ ಸಂಘ ನಿ., ಹಾಸನ	ಹಾಸನ	ಕಾರ್ಯನಿರತ
18	ಕನಕ ನೌಕರರ ಗೃಹ ನಿರ್ಮಾಣ ಸಹಕಾರ ಸಂಘ ನಿ., ಹಾಸನ	ಹಾಸನ	ಕಾರ್ಯನಿರತ
19	ಹಾಸನ ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕ್ ಮತ್ತು ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳ ನೌಕರರ ಗೃಹ ನಿರ್ಮಾಣ ಸಹಕಾರ ಸಂಘ ನಿ., ಹಾಸನ.	ಹಾಸನ	ಕಾರ್ಯನಿರತ

20	ಹಾಸನ ಜಿಲ್ಲಾ, ರಾಜ್ಯ ಮತ್ತು ಕೇಂದ್ರ ಸರ್ಕಾರಿ ನೌಕರರ ಗೃಹ ನಿರ್ಮಾಣ ಸಹಕಾರ ಸಂಘ ನಿ., ಹಾಸನ	ಹಾಸನ	ಕಾರ್ಯನಿರತ
21	ಹಾಸನ ತಾಲೂಕು ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತದ ನೌಕರರ ಗೃಹ ನಿರ್ಮಾಣ ಸಹಕಾರ ಸಂಘ ನಿ., ಹಾಸನ	ಹಾಸನ	ಕಾರ್ಯನಿರತ
22	ಹಾಸನ ಜಿಲ್ಲಾ ಸರ್ಕಾರಿ, ಅರೆ ಸರ್ಕಾರಿ ಹಾಗೂ ನಿಗಮ ಮಂಡಳಿ ನೌಕರರ ಗೃಹ ನಿರ್ಮಾಣ ಸಹಕಾರ ಸಂಘ ನಿ., ಹಾಸನ	ಹಾಸನ	ಕಾರ್ಯನಿರತ
23	ಹಾಸನ ಜಿಲ್ಲಾ ಇಂಜಿನಿಯರುಗಳ ಗೃಹ ನಿರ್ಮಾಣ ಸಹಕಾರ ಸಂಘ ನಿ., ಹಾಸನ	ಹಾಸನ	ಕಾರ್ಯನಿರತ
24	ಗೃಹ ನಿರ್ಮಾಣ ಸಹಕಾರ ಸಂಘ ನಿ., ರಾಮನಾಥಪುರ	ಅರಕಲಗೂಡು	ಕಾರ್ಯನಿರತ
	ಸಮಾಪನಾ ಸಹಕಾರ ಸಂಘಗಳು		
1	ಗೃಹ ನಿರ್ಮಾಣ ಸಹಕಾರ ಸಂಘ ನಿ., ಅರಸೀಕೆರೆ	ಅರಸೀಕೆರೆ	ಸಮಾಪನೆ
2	ಹಾಸನ ತಾ॥ ಗ್ರಾಮಾಂತರ ಗೃಹ ನಿರ್ಮಾಣ ಸಹಕಾರ ಸಂಘ ನಿ., ಹಾಸನ	ಹಾಸನ	ಸಮಾಪನೆ
3	ಟೌನ್ ಗೃಹ ನಿರ್ಮಾಣ ಸಹಕಾರ ಸಂಘ ನಿ., ಹೊಳೆನರಸೀಪುರ	ಹೊ.ನ.ಪುರ	ಸಮಾಪನೆ
4	ತಾಲ್ಲೂಕು ಗೃಹ ನಿರ್ಮಾಣ ಸಹಕಾರ ಸಂಘ ನಿ., ಬೇಲೂರು	ಬೇಲೂರು	ಸಮಾಪನೆ
5	ಗೃಹ ನಿರ್ಮಾಣ ಸಹಕಾರ ಸಂಘ ನಿ., ಸಕಲೇಶಪುರ	ಸಕಲೇಶಪುರ	ಸಮಾಪನೆ
6	ಗೃಹ ನಿರ್ಮಾಣ ಸಹಕಾರ ಸಂಘ ನಿ., ಅರಕಲಗೂಡು	ಅರಕಲಗೂಡು	ಸಮಾಪನೆ
	ಸ್ಥಗಿತಗೊಂಡ ಸಹಕಾರ ಸಂಘಗಳು		
1	ಜಿಲ್ಲಾ ಪಿ ಅಂಡ್ ಟಿ ಗೃಹ ನಿರ್ಮಾಣ ಸಹಕಾರ ಸಂಘ ನಿ., ಹಾಸನ	ಹಾಸನ	ಸ್ಥಗಿತ
2	ಪೋಲೀಸ್ ಅಫಿಷಿಯಲ್ಸ್ ಗೃಹ ನಿರ್ಮಾಣ ಸಹಕಾರ ಸಂಘ ನಿ., ಹಾಸನ	ಹಾಸನ	ಸ್ಥಗಿತ
3	ಹಾಸನ ತಾಲ್ಲೂಕು ವಕೀಲರ ಗೃಹ ನಿರ್ಮಾಣ ಸಹಕಾರ ಸಂಘ ನಿ., ಹಾಸನ	ಹಾಸನ	ಸ್ಥಗಿತ
4	ಹಾಸನ ಜಿಲ್ಲಾ ಬ್ಯಾಂಕ್ ನೌಕರರ ಗೃಹ ನಿರ್ಮಾಣ ಸಹಕಾರ ಸಂಘ ನಿ., ಹಾಸನ	ಹಾಸನ	ಸ್ಥಗಿತ
5	ಗೃಹ ನಿರ್ಮಾಣ ಸಹಕಾರ ಸಂಘ ನಿ., ಚನ್ನರಾಯಪಟ್ಟಣ	ಚ.ರಾ.ಪಟ್ಟಣ	ಸ್ಥಗಿತ
6	ಗೃಹ ನಿರ್ಮಾಣ ಸಹಕಾರ ಸಂಘ ನಿ., ಆಲೂರು	ಆಲೂರು	ಸ್ಥಗಿತ

ಸಹಕಾರ ಸಂಘಗಳ ನಿಬಂಧಕರು,
ಕರ್ನಾಟಕ ರಾಜ್ಯ, ಬೆಂಗಳೂರು

46

ಕರ್ನಾಟಕ ಸರ್ಕಾರ

ಸಂಖ್ಯೆ: ನಅಇ43ಎಲ್‌ಎಕ್ಯೂ / ~~ಎಲ್‌ಸಿಕ್ಯೂ~~ 2020

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಕಾಸ ಸೌಧ,
ಬೆಂಗಳೂರು, ದಿನಾಂಕ 19-03-2020

20/3

ಇವರಿಂದ:
ಸರ್ಕಾರದ ಪ್ರಧಾನ ಕಾರ್ಯದರ್ಶಿ,
ನಗರಾಭಿವೃದ್ಧಿ ಇಲಾಖೆ,
ವಿಕಾಸ ಸೌಧ,
ಬೆಂಗಳೂರು.

ಇವರಿಗೆ:
ಕಾರ್ಯದರ್ಶಿಗಳು,
ಕರ್ನಾಟಕ ವಿಧಾನ ಸಭೆ / ~~ಪರಿಷತ್,~~
ವಿಧಾನ ಸೌಧ,
ಬೆಂಗಳೂರು.

ಮಾನ್ಯರೆ,

ವಿಷಯ:- ಕರ್ನಾಟಕ ವಿಧಾನ ಸಭೆ / ~~ಪರಿಷತ್~~ ಸದಸ್ಯರಾದ ಶ್ರೀ . ಶಿವಯೋಗಿ ಸ್ವಾಮಿ. ಎಂ. ಆನ್.ಕೆ. ಇವರ ಚುಕ್ಕೆ ~~ಗುರುತಿನ~~ / ಗುರುತಿಲ್ಲದ ಪ್ರಶ್ನೆ ಸಂಖ್ಯೆ:2662ಕ್ಕೆ ಉತ್ತರ ನೀಡುವ ಬಗ್ಗೆ.

.----

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಕರ್ನಾಟಕ ವಿಧಾನ ಸಭೆ/ ಪರಿಷತ್ತಿನ ಸದಸ್ಯರಾದ ಶ್ರೀ . ಶಿವಯೋಗಿ ಸ್ವಾಮಿ. ಎಂ. ಆನ್.ಕೆ. ಇವರು ಮಂಡಿಸಿರುವ ಚುಕ್ಕೆ ~~ಗುರುತಿನ~~ / ಗುರುತಿಲ್ಲದ ಪ್ರಶ್ನೆ ಸಂಖ್ಯೆ:2662 ಕ್ಕೆ ಉತ್ತರವನ್ನು ತಯಾರಿಸಿದ್ದು, ಇದರ 100 ಪ್ರತಿಗಳನ್ನು ಇದರೊಂದಿಗೆ ಕಳುಹಿಸಲು ನಿರ್ದೇಶಿತನಾಗಿದ್ದೇನೆ.

ತಮ್ಮ ನಂಬುಗೆಯ,

19/3

(ಎ.ವಿಜಯಕುಮಾರ್)
ಸರ್ಕಾರದ ಅಧೀನ ಕಾರ್ಯದರ್ಶಿ,
ನಗರಾಭಿವೃದ್ಧಿ ಇಲಾಖೆ.

ಕರ್ನಾಟಕ ವಿಧಾನಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	2662
ಸದಸ್ಯರ ಹೆಸರು	:	ಶ್ರೀ ಕುಮಾರಸ್ವಾಮಿ ಹೆಚ್.ಕೆ. (ಸಕಲೇಶಪುರ)
ಉತ್ತರಿಸುವ ದಿನಾಂಕ	:	20.03.2020
ಉತ್ತರಿಸುವ ಸಚಿವರು	:	ಮಾನ್ಯ ಪೌರಾಡಳಿತ, ತೋಟಗಾರಿಕೆ ಮತ್ತು ರೇಷ್ಮೆ ಸಚಿವರು

ಕ್ರ.ಸಂ.	ಪ್ರಶ್ನೆ	ಉತ್ತರ
ಅ)	ರಾಜ್ಯದಲ್ಲಿ ಹಲವಾರು ವರ್ಷಗಳಿಂದ ಸಹಾಯಕ ಇಂಜಿನಿಯರ್, ಕಿರಿಯ ಇಂಜಿನಿಯರ್ ಹಾಗೂ ಪರಿಸರ ಇಂಜಿನಿಯರ್ ಹುದ್ದೆಗಳು ಖಾಲಿ ಇರುವುದರಿಂದ ನಗರಸಭೆ, ಪುರಸಭೆ ಹಾಗೂ ಪಟ್ಟಣ ಪಂಚಾಯಿತಿಗಳ ವ್ಯಾಪ್ತಿಯಲ್ಲಿ ಮೂಲ ಸೌಕರ್ಯಗಳಾದ ರಸ್ತೆ, ಚರಂಡಿ, ಒಳಚರಂಡಿ ಹಾಗೂ ಇನ್ನಿತರೆ ಅಭಿವೃದ್ಧಿ ಕಾಮಗಾರಿಗಳ ನಿರ್ವಹಣೆ ಮಾಡಲು ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ರಾಜ್ಯದ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಮಂಜೂರಾದ 59 ಸಹಾಯಕ ಅಭಿಯಂತರರ ಹುದ್ದೆಗಳ ಎದುರಾಗಿ 50 ಸಹಾಯಕ ಅಭಿಯಂತರರು, 174 ಪರಿಸರ ಅಭಿಯಂತರರ ಹುದ್ದೆಗಳ ಎದುರಾಗಿ 161 ಪರಿಸರ ಅಭಿಯಂತರರು ಹಾಗೂ 499 ಕಿರಿಯ ಅಭಿಯಂತರ ಹುದ್ದೆಯ ಎದುರಾಗಿ 278 ಕಿರಿಯ ಅಭಿಯಂತರರು ಕರ್ತವ್ಯ ನಿರ್ವಹಿಸುತ್ತಿರುತ್ತಾರೆ.
ಆ)	ಹಾಗಿದ್ದಲ್ಲಿ, ಸದರಿ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; ಯಾವ ಕಾಲಮಿತಿಯೊಳಗೆ ಭರ್ತಿ ಮಾಡಲಾಗುವುದು? (ಸಂಪೂರ್ಣ ಮಾಹಿತಿ ನೀಡುವುದು)	ಖಾಲಿಯಿರುವ ಸಹಾಯಕ ಅಭಿಯಂತರರು, ಕಿರಿಯ ಅಭಿಯಂತರರು ಹಾಗೂ ಪರಿಸರ ಅಭಿಯಂತರರ ಹುದ್ದೆಗಳ ವಿವರ ಈ ಕೆಳಗಿನಂತಿದೆ. ಹುದ್ದೆ — ಖಾಲಿಯಿರುವ ಹುದ್ದೆಗಳ ಸಂಖ್ಯೆ ಸಹಾಯಕ ಅಭಿಯಂತರರು — 9 ಪರಿಸರ ಅಭಿಯಂತರರು — 13 ಕಿರಿಯ ಅಭಿಯಂತರರು — 221 ಖಾಲಿಯಿರುವ ಹುದ್ದೆಗಳ ಭರ್ತಿಗೆ ಸಂಬಂಧಿಸಿದಂತೆ ಈಗಾಗಲೇ ಕರ್ನಾಟಕ ಲೋಕ ಸೇವಾ ಆಯೋಗಕ್ಕೆ ನೇರ ನೇಮಕಾತಿ ಅಡಿಯಲ್ಲಿ ಅರ್ಹ ಅಭ್ಯರ್ಥಿಗಳನ್ನು ಆಯ್ಕೆ ಮಾಡಿ ಕಳುಹಿಸಲು ಕೋರಿ ಪ್ರಸ್ತಾವನೆಯನ್ನು ಕಳುಹಿಸಲಾಗಿದ್ದು ವಿವರಗಳು ಈ ಕೆಳಗಿನಂತಿದೆ.

		ಸಹಾಯಕ ಅಭಿಯಂತರರು- 04 ಪರಿಸರ ಅಭಿಯಂತರರು- 04 ಕಿರಿಯ ಅಭಿಯಂತರರು- 91 ಕರ್ನಾಟಕ ಲೋಕ ಸೇವಾ ಆಯೋಗದಿಂದ ಅರ್ಹ ಅಭ್ಯರ್ಥಿಗಳ ಆಯ್ಕೆ ಪಟ್ಟಿ ಸ್ವೀಕೃತವಾದ ನಂತರ ಖಾಲಿಯಿರುವ ಅಭಿಯಂತರರ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮವಹಿಸಲಾಗುತ್ತದೆ. ಇನ್ನುಳಿದ ಖಾಲಿ ಹುದ್ದೆಗಳನ್ನು ನಿಯಮಾನುಸಾರ ಭರ್ತಿ ಮಾಡಲು ಕರ್ನಾಟಕ ಲೋಕಸೇವಾ ಆಯೋಗಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲು ಕ್ರಮವಹಿಸಲಾಗುವುದು.

ಸಂಖ್ಯೆ: ನಅಇ 43 ಎಲ್‌ಎಕ್ಯೂ 2020

(ನಾರಾಯಣ ಗೌಡ)
ಪೌರಾಡಳಿತ, ತೋಟಗಾರಿಕೆ
ಹಾಗೂ ರೇಷ್ಮೆ ಸಚಿವರು

ಕರ್ನಾಟಕ ವಿಧಾನಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	2662
ಸದಸ್ಯರ ಹೆಸರು	:	ಶ್ರೀ ಕುಮಾರಸ್ವಾಮಿ ಹೆಚ್.ಕೆ. (ಸಕಲೇಶಪುರ)
ಉತ್ತರಿಸುವ ದಿನಾಂಕ	:	20.03.2020
ಉತ್ತರಿಸುವ ಸಚಿವರು	:	ಮಾನ್ಯ ಪೌರಾಡಳಿತ, ತೋಟಗಾರಿಕೆ ಮತ್ತು ರೇಷ್ಮೆ ಸಚಿವರು

ಕ್ರ.ಸಂ.	ಪ್ರಶ್ನೆ	ಉತ್ತರ
ಅ)	ರಾಜ್ಯದಲ್ಲಿ ಹಲವಾರು ವರ್ಷಗಳಿಂದ ಸಹಾಯಕ ಇಂಜಿನಿಯರ್, ಕಿರಿಯ ಇಂಜಿನಿಯರ್ ಹಾಗೂ ಪರಿಸರ ಇಂಜಿನಿಯರ್ ಹುದ್ದೆಗಳು ಖಾಲಿ ಇರುವುದರಿಂದ ನಗರಸಭೆ, ಪುರಸಭೆ ಹಾಗೂ ಪಟ್ಟಣ ಪಂಚಾಯಿತಿಗಳ ವ್ಯಾಪ್ತಿಯಲ್ಲಿ ಮೂಲ ಸೌಕರ್ಯಗಳಾದ ರಸ್ತೆ, ಚರಂಡಿ, ಒಳಚರಂಡಿ ಹಾಗೂ ಇನ್ನಿತರೆ ಅಭಿವೃದ್ಧಿ ಕಾಮಗಾರಿಗಳ ನಿರ್ವಹಣೆ ಮಾಡಲು ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ರಾಜ್ಯದ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಮಂಜೂರಾದ 59 ಸಹಾಯಕ ಅಭಿಯಂತರರ ಹುದ್ದೆಗಳ ಎದುರಾಗಿ 50 ಸಹಾಯಕ ಅಭಿಯಂತರರು, 174 ಪರಿಸರ ಅಭಿಯಂತರರ ಹುದ್ದೆಗಳ ಎದುರಾಗಿ 161 ಪರಿಸರ ಅಭಿಯಂತರರು ಹಾಗೂ 499 ಕಿರಿಯ ಅಭಿಯಂತರ ಹುದ್ದೆಯ ಎದುರಾಗಿ 278 ಕಿರಿಯ ಅಭಿಯಂತರರು ಕರ್ತವ್ಯ ನಿರ್ವಹಿಸುತ್ತಿರುತ್ತಾರೆ.
ಆ)	ಹಾಗಿದ್ದಲ್ಲಿ, ಸದರಿ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; ಯಾವ ಕಾಲಮಿತಿಯೊಳಗೆ ಭರ್ತಿ ಮಾಡಲಾಗುವುದು? (ಸಂಪೂರ್ಣ ಮಾಹಿತಿ ನೀಡುವುದು)	ಖಾಲಿಯಿರುವ ಸಹಾಯಕ ಅಭಿಯಂತರರು, ಕಿರಿಯ ಅಭಿಯಂತರರು ಹಾಗೂ ಪರಿಸರ ಅಭಿಯಂತರರ ಹುದ್ದೆಗಳ ವಿವರ ಈ ಕೆಳಗಿನಂತಿದೆ. **ಹುದ್ದೆ** — **ಖಾಲಿಯಿರುವ ಹುದ್ದೆಗಳ ಸಂಖ್ಯೆ** ಸಹಾಯಕ ಅಭಿಯಂತರರು — 9 ಪರಿಸರ ಅಭಿಯಂತರರು — 13 ಕಿರಿಯ ಅಭಿಯಂತರರು — 221 ಖಾಲಿಯಿರುವ ಹುದ್ದೆಗಳ ಭರ್ತಿಗೆ ಸಂಬಂಧಿಸಿದಂತೆ ಈಗಾಗಲೇ ಕರ್ನಾಟಕ ಲೋಕ ಸೇವಾ ಆಯೋಗಕ್ಕೆ ನೇರ ನೇಮಕಾತಿ ಅಡಿಯಲ್ಲಿ ಅರ್ಹ ಅಭ್ಯರ್ಥಿಗಳನ್ನು ಆಯ್ಕೆ ಮಾಡಿ ಕಳುಹಿಸಲು ಕೋರಿ ಪ್ರಸ್ತಾವನೆಯನ್ನು ಕಳುಹಿಸಲಾಗಿದ್ದು ವಿವರಗಳು ಈ ಕೆಳಗಿನಂತಿದೆ.

			ಸಹಾಯಕ ಅಭಿಯಂತರರು- 04 ಪರಿಸರ ಅಭಿಯಂತರರು- 04 ಕಿರಿಯ ಅಭಿಯಂತರರು- 91 ಕರ್ನಾಟಕ ಲೋಕ ಸೇವಾ ಆಯೋಗದಿಂದ ಅರ್ಹ ಅಭ್ಯರ್ಥಿಗಳ ಆಯ್ಕೆ ಪಟ್ಟಿ ಸ್ವೀಕೃತವಾದ ನಂತರ ಖಾಲಿಯಿರುವ ಅಭಿಯಂತರರ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮವಹಿಸಲಾಗುತ್ತದೆ. ಇನ್ನುಳಿದ ಖಾಲಿ ಹುದ್ದೆಗಳನ್ನು ನಿಯಮಾನುಸಾರ ಭರ್ತಿ ಮಾಡಲು ಕರ್ನಾಟಕ ಲೋಕಸೇವಾ ಆಯೋಗಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲು ಕ್ರಮವಹಿಸಲಾಗುವುದು.

ಸಂಖ್ಯೆ: ನಅಇ 43 ಎಲ್‌ಎಕ್ಯೂ 2020

(ನಾರಾಯಣ ಗೌಡ)
ಪೌರಾಡಳಿತ, ತೋಟಗಾರಿಕೆ
ಹಾಗೂ ರೇಷ್ಮೆ ಸಚಿವರು

ಕರ್ನಾಟಕ ಸರ್ಕಾರ

ಸಂಖ್ಯೆ: ಸಿಒ 31 ಡಬ್ಲ್ಯೂಹೆಚ್‌ಸಿ 2020

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ: 18-03-2020

us
20/3/2020
47

ಇಂದ:

ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ,
ಸಹಕಾರ ಇಲಾಖೆ,
ಬೆಂಗಳೂರು-560001.

ಇವರಿಗೆ:

ಕಾರ್ಯದರ್ಶಿ,
ಕರ್ನಾಟಕ ವಿಧಾನ ಸಭೆ,
ವಿಧಾನ ಸೌಧ, ಬೆಂಗಳೂರು.

ಮಾನ್ಯರೆ,

ವಿಷಯ: ವಿಧಾನ ಸಭಾ ಸದಸ್ಯರಾದ ಶ್ರೀ ಲಿಂಗೇಶ ಕೆ.ಎಸ್. (ಬೇಲೂರು) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 2084 ಕ್ಕೆ ಉತ್ತರಿಸುವ ಬಗ್ಗೆ.

******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ವಿಧಾನ ಸಭಾ ಸದಸ್ಯರಾದ ಶ್ರೀ ಲಿಂಗೇಶ ಕೆ.ಎಸ್. (ಬೇಲೂರು) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 2084 ಕ್ಕೆ ಸಂಬಂಧಿಸಿದ ಉತ್ತರದ 100 ಪ್ರತಿಗಳನ್ನು ಇದರೊಂದಿಗೆ ಲಗತ್ತಿಸಿ ಕಳುಹಿಸಲಾಗಿದೆ.

ತಮ್ಮ ನಂಬುಗೆಯ,

(ಶಾಹೀನ್ ಪರ್ವೀನ್ ಕೆ)
ಶಾಖಾಧಿಕಾರಿ ಡಿ-ಶಾಖೆ
ಸಹಕಾರ ಇಲಾಖೆ.
18/3/2020

ಕರ್ನಾಟಕ ವಿಧಾನ ಸಭೆ

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	2084
2. ಸದಸ್ಯರ ಹೆಸರು	:	ಶ್ರೀ ಲಿಂಗೇಶ ಕೆ.ಎಸ್. (ಬೇಲೂರು)
3. ಉತ್ತರಿಸಬೇಕಾದ ದಿನಾಂಕ	:	20-03-2020
4. ಉತ್ತರಿಸುವ ಸಚಿವರು	:	ಸಹಕಾರ ಸಚಿವರು

